ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 142

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 13-05-2026

# ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ಸವಲತ್ತು ಪಡೆದವರ ವಿರುದ್ಧ ಕ್ರಮಕ್ಕೆ ಆಗ್ರಹ

**ಬೆಂಗಳೂರು, ಮೇ 12–** ಪರಿಶಿಷ್ಟರ ಮೀಸಲಾತಿ ಹೆಚ್ಚಳ, ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರ ವಿರುದ್ಧ ಕಠಿಣ ಕ್ರಮ ಜರುಗಿಸಲು ಸರ್ವ ಪಕ್ಷಗಳ ಸಭೆ ಕರೆಯುವಂತೆ ಕರ್ನಾಟಕ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದೆ.



ಮಾಜಿ ಸಂಸದ ವಿ.ಎಸ್. ಉಗ್ರಪ್ಪ ನೇತೃತ್ವದಲ್ಲಿಂದು ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿಯವರನ್ನು ಭೇಟಿ ಮಾಡಿದ ನಿಯೋಗ, ಹಲವು ಬೇಡಿಕೆಗಳನ್ನು ಮುಂದಿಟ್ಟಿದೆ. ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟರು (ಎಸ್.ಸಿ) ಶೇ.17.1 ರಷ್ಟು ಮತ್ತು ಪರಿಶಿಷ್ಟ ಪಂಗಡ (ಎಸ್ ಟಿ) ಶೇ.6.95ರಷ್ಟಿದ್ದಾರೆ. ಜನಸಂಖ್ಯೆಗೆ ಅನುಗುಣಕ್ಕೆ ಮೀಸಲಾಗಿ ನೀಡಬೇಕು ಎಂಬುದು ಸಂವಿಧಾನದ ಆಶಯ, ಅದರಂತೆ ಲೋಕಸಭೆ, ವಿಧಾನಸಭೆ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನೀಡಲಾಗಿದೆ. ರಾಜ್ಯದಲ್ಲೂ ಎಸ್‌ಸಿಪಿ ಮತ್ತು ಟಿಎಸ್‌ಪಿ ಕಾಯ್ದೆ ರೂಪಿಸಿ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ನೀಡಲಾಗುತ್ತಿದೆ.

ಶಿಕ್ಷಣ ಮತ್ತು ಉದ್ಯೋಗಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಎಸ್‌ಸಿಗೆ ಶೇ.15ರ ಬದಲು ಶೇ.17, ಎಸ್‌ಟಿಗೆ ಶೇ.3ರ ಬದಲು ಶೇ.7ರಷ್ಟು ಮೀಸಲಾತಿ ನೀಡಬೇಕೆಂದು ದಶಕಗಳಿಂದ ಹೋರಾಟ ನಡೆಯುತ್ತಿದೆ. ಹೈಕೋರ್ಟ್ ರಿಟ್ ಅರ್ಜಿ ಸಂಖ್ಯೆ 16852/ 2015 ರಲ್ಲಿ ಕರ್ನಾಟಕ ರಾಜ್ಯ ನಾಯಕ ವಿದ್ಯಾರ್ಥಿ ಸಂಘವು ದಾಖಲಿಸಿದ ಮನವಿಯನ್ನು ಪರಿಗಣಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಈ ಕುರಿತು ತೀರ್ಮಾನ ಕೈಗೊಳ್ಳಲು ಮತ್ತು ಪ್ರಾಯೋಗಿಕ ದತ್ತಾಂಶವನ್ನು ಸಂಗ್ರಹಿಸಲು ರಾಜ್ಯ ಸರ್ಕಾರ 2017ರ ಜು. 22ರಂದು ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್‌ರವರ ನೇತೃತ್ವದಲ್ಲಿ ಆಯೋಗ ನೇಮಿಸಿತ್ತು.

ಆಯೋಗವು ವ್ಯಾಪಕ ಅಧ್ಯಯನ ನಡೆಸಿ, ಎಸ್‌ಸಿ ಮತ್ತು ಎಸ್‌ಟಿ ಮೀಸಲಾತಿ ಪ್ರಮಾಣವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಶೇ.15ರ ಬದಲು 17, ಶೇ.3ರ ಬದಲು ಶೇ.7ಕ್ಕೆ ಹೆಚ್ಚಿಸಲು 2020ರ ಜುಲೈ 2ರಂದು ವರದಿ ನೀಡಿತ್ತು. ಈ ವರದಿಯನ್ನು ಅವಲೋಕಿಸಲು ರಾಜ್ಯ ಸರ್ಕಾರ ಮತ್ತೊಂದು ಆಯೋಗವನ್ನು ನ್ಯಾಯಮೂರ್ತಿ ಸುಭಾಷ್ ಅಡಿರವರ ನೇತೃತ್ವದಲ್ಲಿ ನೇಮಕ ಮಾಡಿ ಆ ಆಯೋಗವು 2022ರ ಅ.7ರಂದು ನೀಡಿದ ವರದಿಯಲ್ಲಿಯೂ ಎಸ್‌ಸಿ ಮತ್ತು ಎಸ್‌ಟಿ ಮೀಸಲಾತಿಯನ್ನು ಶೇ.17 ಮತ್ತು ಶೇ.7ಕ್ಕೆ ಅನುಕ್ರಮವಾಗಿ ಹೆಚ್ಚಿಸಲು ತಿಳಿಸಿತ್ತು ಎಂದು ವಿವರಿಸಿದ್ದಾರೆ.

ಈ ಎಲ್ಲಾ ಕಾರಣಗಳಿಂದ ಸರ್ವ ಪಕ್ಷಗಳ ಸಹಕಾರದಿಂದ ರಾಜ್ಯ ಸರ್ಕಾರ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ 2022 ನ್ನು ಜಾರಿಗೆ ತರಲಾಯಿತು. ಈ ಕಾನೂನು ಸಂವಿಧಾನದ 9ನೇ ಷೆಡ್ಯೂಲ್‌ಗೆ ಸೇರದಿದ್ದರೆ ತೊಂದರೆಯಾಗುತ್ತದೆ. ಈ ಕುರಿತು ಕ್ರಮವಹಿಸಲು ನಿರಂತರ ಹೋರಾಟ ನಡೆಯುತ್ತಿದೆ.

2023ರ ಮಾ.23 ಅಂದಿನ ಮುಖ್ಯ ಕಾರ್ಯದರ್ಶಿಯವರು ಕೇಂದ್ರ ಸರ್ಕಾರದ ಗೃಹ ಇಲಾಖೆಗೆ ಪತ್ರ ಬರೆದು ಮನವಿ ಮಾಡಿದ್ದರು. ಕೇಂದ್ರ ಸರ್ಕಾರದ ಗೃಹ ಇಲಾಖೆಯ ಕಾರ್ಯದರ್ಶಿಯವರು 2023ರ ಮೇ 11ರಂದು ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಸದರಿ ವಿಚಾರ ನಮ ಇಲಾಖೆಗೆ ಬರುವುದಿಲ್ಲ. ನೀವು ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಮತ್ತು ಬುಡಕಟ್ಟು ಜನಾಂಗ ಇಲಾಖೆಯನ್ನು ಸಂಪರ್ಕಿಸಿ ಪರಿಹಾರ ರೂಪಿಸಿಕೊಳ್ಳಿ ಎಂದು ಬರೆದಿರುತ್ತಾರೆ. ಆದರೆ ರಾಜ್ಯ ಸರ್ಕಾರ ಅನೇಕ ವರ್ಷಗಳ ಕಾಲ ಈ ಹಿನ್ನೆಲೆಯಲ್ಲಿ ಯಾವುದೇ ಕ್ರಮ ಜರುಗಿಸಿರುವುದಿಲ್ಲ ಎಂದು ಆಕ್ಷೇಪಿಸಿದ್ದಾರೆ.

2022 ರ ಕಾನೂನಿನ ಶೇ.56 ಮೀಸಲಾತಿಯ ರೀತ್ಯಾ 2023–24, 2024–25ನೇ ಸಾಲುಗಳಲ್ಲಿ 2ನೇಪುಟಕ್ಕೆ

# ನೀಟ್ ಮರು ಪರೀಕ್ಷೆ: ಸಿಬಿಐ ತನಿಖೆಗೆ ಕೇಂದ್ರ ಆದೇಶ




**ನವದೆಹಲಿ.ಮೇ12:** ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ಕಳೆದ ಮೇ 3 ರಂದು ನಡೆಸಲಾಗಿದ್ದ ನೀಟ್ –ಯುಜಿ 2026 ಪರೀಕ್ಷೆಯಲ್ಲಿ ಅಕ್ರಮ ನಡೆದಿರುವ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದ್ದು, ಮರು ಪರೀಕ್ಷೆ ನಡೆಸುವುದಾಗಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ( ಎನ್‌ಟಿಎ) ಹೇಳಿದೆ.
ನೀಟ್ ಮರು ಪರೀಕ್ಷೆಯ ದಿನಾಂಕವನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು. ಹಾಗೂ ಪರೀಕ್ಷಾ ಅಕ್ರಮದ ಬಗ್ಗೆ ಸಿಬಿಐ ತನಿಖೆ ನಡೆಸುವುದಾಗಿ ಎನ್ ಟಿಎ ಹೇಳಿದೆ.


ಮೇ 3ರಂದು ನಡೆದಿದ್ದ ಪರೀಕ್ಷೆಯಲ್ಲಿ ರಾಜಸ್ಥಾನದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಪ್ರಕರಣದ ಸಂಪೂರ್ಣ ತನಿಖೆಯನ್ನು ಕೇಂದ್ರ ಸರ್ಕಾರ ಸಿಬಿಐಗೆ ಒಪ್ಪಿಸಿದೆ.


ಪರೀಕ್ಷೆಯ ಪಾವಿತ್ರ್ಯ ಮತ್ತು ಪಾರದರ್ಶಕತೆ ಹಾನಿಗೊಳಗಾಗಿರುವ ಸಾಧ್ಯತೆಗಳ ಬಗ್ಗೆ ಕೇಂದ್ರ ತನಿಖಾ ಸಂಸ್ಥೆಗಳಿಂದ ಬಂದ ಮಾಹಿತಿಯ ಆಧಾರದ ಮೇಲೆ ಪರೀಕ್ಷೆಯನ್ನು ಅಮಾನ್ಯಗೊಳಿಸಲಾಗಿದೆ ಎಂದು ಎನ್‌ಟಿಎ ತಿಳಿಸಿದೆ. “ಪರೀಕ್ಷೆಯ ವಿಶ್ವಾಸಾರ್ಹತೆಯನ್ನು ಕಾಪಾಡುವ ದೃಷ್ಟಿಯಿಂದ ಪರೀಕ್ಷೆಯನ್ನು ಮುಂದುವರಿಸಲು ಸಾಧ್ಯವಾಗಲಿಲ್ಲ” ಎಂದು ಸಂಸ್ಥೆ ತನ್ನ ಪ್ರಕಟಣೆಯಲ್ಲಿ ಹೇಳಿದೆ.

ಏನಿದು ಆರೋಪ: ಪರೀಕ್ಷೆಗೆ ಕೆಲವು ದಿನಗಳ ಮೊದಲು ಸುಮಾರು 400 ಪ್ರಶ್ನೆಗಳಿರುವ ಪ್ರಶ್ನಾ ಸೆಟ್‌ಗಳು ಕೆಲ ವಿದ್ಯಾರ್ಥಿಗಳಿಗೆ ವಿತರಿಸಲ್ಪಟ್ಟಿದ್ದವು ಎಂಬ ಆರೋಪ ಕೇಳಿಬಂದಿದೆ. ಈ ಪೈಕಿ ಜೀವವಿಜ್ಞಾನ ಮತ್ತು 2ನೇಪುಟಕ್ಕೆ►

# ಅಮೃತ–2 ಆಮೆಗತಿ: ಮಾನ್ವಿ ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರ

## ಕೆರೆ ತುಂಬಿದ್ದರೂ ನೀರಿಲ್ಲದ ಮಾನ್ವಿ : ವಿದ್ಯುತ್ ಅಡಚಣೆ : ಪೈಪ್ ಸಮಸ್ಯೆಯಿಂದ ನೀರು ವ್ಯತ್ಯಯ







ಧೈರ್ಯದ ದಾರಿ

**ಮಾನ್ವಿ –:** ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ರಬ್ಬಣಕಲ್ ಸಮೀಪದ ಕೆರೆಗೆ ವಿದ್ಯುತ್ ಅಡಚಣೆ, ಅಸಮರ್ಪಕ ಪೈಪ್‌ಲೈನ್ ಹಾಗೂ ನಿರ್ವಹಣೆ ವೈಫಲ್ಯದಿಂದ ಪಟ್ಟಣದ ಹಲವು ವಾರ್ಡ್‌ಗಳಿಗೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗದೆ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಪಟ್ಟಣಕ್ಕೆ ಕುಡಿಯುವ ನೀರು ಪೂರೈಸುವ ಕೆರೆ ಸಂಪೂರ್ಣವಾಗಿ ಕುಡಿಯುವ ಕಾಡಲು ಎಲ್ಲಾ ವಾರ್ಡ್‌ಗಳಲ್ಲಿ ಸಮರ್ಪಕವಾದ ಪೈಪ್‌ಲೈನ್ ವ್ಯವಸ್ಥೆ ಹಾಗೂ ಕುಡಿಯುವ ನೀರು ಸಂಗ್ರಹದ ಟ್ಯಾಕ್‌ಗಳ ಸೌಲಭ್ಯ ಇಲ್ಲದಿರುವುದು ಸಮಸ್ಯೆಗೆ ಮೂಲ ಕಾರಣವಾಗಿದೆ. ಪಟ್ಟಣದ ಎಲ್ಲಾ ವಾರ್ಡ್‌ಗಳಿಗೆ 3 ದಿನಕ್ಕೊಮ್ಮೆ ನೀರು ಸರಬರಾಜು ಮಾಡುತ್ತಿರುವುದಾಗಿ ಸ್ಥಳೀಯ ಪುರಸಭೆಯ ಅಧಿಕಾರಿಗಳು ಹೇಳುತ್ತಿದ್ದಾರೆ. ಆದರೆ ಪಟ್ಟಣದ 7, 8, 9, 10, 11, 12, 13ನೇ ವಾರ್ಡ್‌ಗಳ ವ್ಯಾಪ್ತಿಯ ಕೋನಾಪುರಪೇಟೆ, ಸೋನಿಯಾ ಗಾಂಧಿ ನಗರ, ಜನತಾ ಕಾಲೊನಿ, ಜುಮ್ಮಲದೊಡ್ಡಿ, ಬೆಳಗಿನಪೇಟೆ ಮತ್ತಿತರ ಕಡೆ ಕಳೆದ ಐದು ದಿನಗಳಿಂದ ಕುಡಿಯುವ ನೀರು ಸರಬರಾಜು ಆಗಿಲ್ಲ ಎಂದು ವಾರ್ಡ್ ನಿವಾಸಿಗಳು ಭಾನುವಾರ ದೂರಿದ್ದಾರೆ. ಪಟ್ಟಣದ ಬೆಳಗಿನ ಪೇಟೆಯ ಜನರು ಜುಮ್ಮಲದೊಡ್ಡಿ ಕೆರೆಯ ಚಿಲುಮೆ ನೀರು ಕುಡಿಯಲು ಅವಲಂಭಿಸಿದ್ದು, ಈ ಕೆರೆಯ ಹತ್ತಿರ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಸ್ಥಳೀಯರು ಒತ್ತಾಯಸಿದ್ದಾರೆ.

ಅಮೃತ ಯೋಜನೆ –: ಪಟ್ಟಣಕ್ಕೆ ದಿನದ 24 ಗಂಟೆ ನಿರಂತರ ಕುಡಿಯುವ ನೀರು ಪೂರೈಸಲು ಪುರಸಭೆಗೆ ಅಮೃತ–2 ಯೋಜನೆ ಅಡಿಯಲ್ಲಿ 61 ಕೋಟಿ ಅನುದಾನ ಮಂಜೂರಾಗಿ ಒಂದೂವರೆ ವರ್ಷ ಕಳೆದಿದೆ. ಈ ಅನುದಾನದ ಮೂಲಕ ಕಾತರಕಿ ಬಳಿ ತುಂಗಭದ್ರಾ ನದಿಗೆ ಹೊಂದಿಕೊಂಡು ಜಾಕ್‌ವೆಲ್ ನಿರ್ಮಾಣ ಹಾಗೂ ಆ ಜಾಕ್‌ವೆಲ್‌ನಿಂದ ರಬ್ಬಣಕಲ್ ಕೆರೆಯವರೆಗೆ ಪೈಪ್‌ಲೈನ್ ವ್ಯವಸ್ಥೆ, ರಬ್ಬಣಕಲ್ ಕೆರೆ ಹತ್ತಿರ 45 ಲಕ್ಷ ಲೀಟರ್ ನೀರು ಸಂಗ್ರಹ ಸಾಮರ್ಥ್ಯದ ಜಲ ಶುದ್ದೀಕರಣ ಘಟಕ ನಿರ್ಮಾಣ, ಮಾನ್ವಿ ಪಟ್ಟಣದ ಮೂರು ಕಡೆ 15 ಲಕ್ಷ ಲೀಟರ್ ಸಾಮರ್ಥ್ಯದ ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಹಾಗೂ ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲಿ ಕುಡಿಯುವ ನೀರು ಸರಬರಾಜಿಗೆ ಹೊಸ ಪೈಪ್‌ಲೈನ್‌ಗಳ ಅಳವಡಿಕೆಯ ಉದ್ದೇಶ ಹೊಂದಲಾಗಿತ್ತು. ಆದರೆ ಅಮೃತ ಯೋಜನೆ ಅಡಿಯಲ್ಲಿ ಕುಡಿಯುವ ನೀರಿನ ಕಾಮಗಾರಿಗಳು ಇದುವರೆಗೂ ಆರಂಭಗೊಳ್ಳದಿರುವ ಕಾರಣ ಕುಡಿಯುವ ನೀರಿನ ಸಮಸ್ಯೆ ಪರಿಹಾರ ಕಾಣದಾಗಿದೆ. ಬೇಸಿಗೆ ಆರಂಭದಲ್ಲಿಯೇ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವುದು ಸಾರ್ವಜನಿಕರಲ್ಲಿ ಆತಂಕ ಸೃಷ್ಟಿಯಾಗಿದೆ.

ಪಟ್ಟಣದ ಕೆರೆ ಭರ್ತಿಯಾಗಿದ್ದರೂ ಪದೇ ಪದೇ ಒಡೆಯುವ ಪೈಪ್‌ಗಳು, ಆಮೆಗತಿಯಲ್ಲಿ ಸಾಗಿರುವ ಅಮೃತ–2 ಯೋಜನೆಯ ಹೊಸ ಪೈಪ್‌ಲೈನ್ ಕಾಮಗಾರಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಅಡ್ಡಿಯಾಗಿವೆ. ಪಟ್ಟಣದಲ್ಲಿ ಒಟ್ಟು 27 ವಾರ್ಡ್‌ಗಳಿವೆ. ಕಳೆದ ವಾರ ಕುಡಿಯುವ ನೀರಿನ ಸಮಸ್ಯೆ ವಿರೋಧಿಸಿ 2, 3, 18, 25 ಹಾಗೂ 26ನೇ ವಾರ್ಡ್ ನಿವಾಸಿಗಳು ನಮಾಜಗೇರಿ ಗುಡ್ಡದ ಕುಡಿಯುವ ನೀರಿನ ಟ್ಯಾಂಕ್ ಹತ್ತಿರ ಪ್ರತಿಭಟನೆ ನಡೆಸಿದ ಘಟನೆ ನಡೆದಿತ್ತು. ಪಟ್ಟಣದ ಹೊರವಲಯದ ರಬ್ಬಣಕಲ್ ಪಂಪ್‌ಹೌಸ್‌ನಿಂದ ಪಟ್ಟಣಕ್ಕೆ ನೀರು ಸರಬರಾಜು ಮಾಡುವ ಪೈಪ್‌ಗಳು ಒಡೆಯುವುದು, ವಾಲ್ವ್ ಬಂದ್ ಆಗುವುದು, ಮೋಟಾರು ಸುಟ್ಟು ಹೋಗುವುದು ಹಲವು ವರ್ಷಗಳಿಂದಲೂ ಸಾಮಾನ್ಯವಾಗಿದ್ದರೂ ಪುರಸಭೆ ಅಧಿಕಾರಿಗಳು ಹಳೆಯ ಪೈಪ್‌ಗಳನ್ನು ಬದಲಿಸುವಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂಬುದು ಸ್ಥಳೀಯರ ದೂರಾಗಿದೆ.

ಒಡೆದ ಪೈಪ್ ದುರಸ್ತಿಗೆ ಕನಿಷ್ಠ ನಾಲ್ಕು ದಿನ ಬೇಕಾಗುತ್ತದೆ. ಪ್ರಸ್ತುತ ಪಟ್ಟಣಕ್ಕೆ ನಾಲ್ಕು ದಿನಕ್ಕೊಮ್ಮೆ ನೀರು ಬಿಡಲಾಗುತ್ತಿದ್ದು, ಪೈಪ್ ಒಡೆದಾಗ ದುರಸ್ತಿ ಕಾರ್ಯ ಮುಗಿದು ಐದಾರು ದಿನಗಳ ನಂತರ ನೀರು ಹರಿಸಲಾಗುತ್ತದೆ ಎಂಬುದು ಕೆಲವು ವಾರ್ಡ್ ನಿವಾಸಿಗಳ ಆರೋಪವಾಗಿದೆ. ಕಳೆದ ಒಂದು ತಿಂಗಳ ಅವಧಿಯಲ್ಲಿ ಮೂರು ಬಾರಿ ವಿವಿಧೆಡೆ ಪೈಪ್‌ಗಳು ಒಡೆದು ಪಟ್ಟಣದ ಜನ ಸಮಸ್ಯೆ ಎದುರಿಸಿದ್ದಾರೆ. ನೀರು ಪೂರೈಕೆಯಲ್ಲಿನ ವ್ಯತ್ಯಯ ನಿರಂತರವಾಗಿರುವ ಕಾರಣ ಕೆಲವು ವಾರ್ಡ್ ಗಳಲ್ಲಿ ಸ್ಥಳೀಯರು ಖಾಸಗಿ ಟ್ಯಾಂಕರ್‌ಗಳನ್ನು ಅವಲಂಬಿಸುವಂತಾಗಿದೆ. ಪಟ್ಟಣ ವ್ಯಾಪ್ತಿಯ ಜುಮ್ಮಲದೊಡ್ಡಿಯಲ್ಲಿ ಹೊಸ ಟ್ಯಾಂಕ್ ನಿರ್ಮಾಣ ಮಾಡಿ ಎಂಟು ವರ್ಷಗಳಾಗಿವೆ. ಈ ಟ್ಯಾಂಕ್‌ಗೆ ನೀರು ಸರಬರಾಜು ಮಾಡಿ ವಿವಿಧ ವಾರ್ಡ್‌ಗಳಿಗೆ ನೀರು ಪೂರೈಸುವ ವ್ಯವಸ್ಥೆಯೂ ಆಗಿಲ್ಲ. ಪಟ್ಟಣದ 27ನೇ ವಾರ್ಡ್‌ನಲ್ಲಿ ಅಮೃತ–2 ಯೋಜನೆ ಅಡಿಯಲ್ಲಿ ರಸ್ತೆ ಬದಿಯಲ್ಲಿ ಕೈಗೊಂಡಿದ್ದ ಹೊಸ ಪೈಪ್‌ಲೈನ್ ಕಾಮಗಾರಿ ಹದಿನೈದು ದಿನಗಳಿಂದ ಸ್ಥಗಿತಗೊಂಡಿದೆ. ಇದರಿಂದ ನಮ್ಮ ವ್ಯಾಪಾರಕ್ಕೆ ತೊಂದರೆಯಾಗಿದೆ ಎಂದು ವ್ಯಾಪಾರಿ ಇರ್ಫಾನ್ ಭಾನುವಾರ ತಿಳಿಸಿದರು. ‘ಪಟ್ಟಣದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ನಡೆದಿರುವ ಕಾರಣ ವಿದ್ಯುತ್ ಸರಬರಾಜು ಸ್ಥಗಿತಗೊಂಡು ಕೆಲವು ವಾರ್ಡ್‌ಗಳಿಗೆ ಕುಡಿಯುವ ನೀರು ಪೂರೈಕೆಗೆ ಅಡ್ಡಿಯಾಗುತ್ತಿದೆ’ ಎಂದು ಪುರಸಭೆ ಸಿಬ್ಬಂದಿ ಹೇಳುತ್ತಾರೆ.

ಪುರಸಭೆಯಲ್ಲಿ ಆಡಳಿತ ಮಂಡಳಿಯ ಅವಧಿ ಮುಗಿದಿರುವ ಕಾರಣ ಸಚಿವ ಎನ್.ಎಸ್.ಬೋಸರಾಜು ಹಾಗೂ ಶಾಸಕ ಜಿ.ಹಂಪಯ್ಯ ನಾಯಕ ಅವರು ಅಮೃತ–2 ಯೋಜನೆಯ ಪೈಪ್‌ಲೈನ್ ಕಾಮಗಾರಿ ಚುರುಕುಗೊಳಿಸಲು ಕ್ರಮ ಕೈಗೊಳ್ಳಬೇಕು. ಕೆಲವು ವಾರ್ಡ್‌ಗಳಲ್ಲಿ ಬತ್ತಿ ಹೋಗಿರುವ ಹಳೆಯ ಕೊಳವೆ ಬಾವಿಗಳ ಪುನಶ್ಚೇತನ ಕಾಮಗಾರಿ ಕೈಗೊಳ್ಳಬೇಕು. ಎಲ್ಲ ವಾರ್ಡ್‌ಗಳಿಗೆ ಸಮರ್ಪಕವಾಗಿ ನೀರು ಸರಬರಾಜು ಮಾಡಲು ಅಧಿಕಾರಿಗಳಿಗೆ ಸೂಚಿಸಬೇಕು ಎಂದು ಸಾಮಾಜಿಕ ಕಾರ್ಯಕರ್ತ ಕೆ.ಎಂ.ಬಾಷಾ ಮನವಿ ಮಾಡಿದ್ದಾರೆ.

**ಕುಡಿಯುವ ನೀರಿನ ಕೆರೆ ಭರ್ತಿಯಾಗಿದೆ. ಕೊಳವೆ ಬಾವಿಗಳ ದುರಸ್ತಿಗೆ ಕ್ರಮ ಕೈಗೊಳ್ಳಲಾಗುವುದು. ಬೇಸಿಗೆಯಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಗೆ ತೊಂದರೆ ಇಲ್ಲ.**
**–: ಪರಶುರಾಮ ದೇವಮಾನೆ ಪುರಸಭೆಯ ಮುಖ್ಯಾಧಿಕಾರಿ ಮಾನ್ವಿ**

**ನಮ್ಮ ವಾರ್ಡ್‌ನಲ್ಲಿ ಪುರಸಭೆಯ ವತಿಯಿಂದ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಬೇಕು. ಈ ಮೂಲಕ ಸಾರ್ವಜನಿಕರ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಬೇಕು.**
**–: ಆಂಜನೇಯ ಬೆಳಗಿನಪೇಟೆ ನಿವಾಸಿ**

# "ಭತ್ತಕ್ಕೆ ಪರ್ಯಾಯವಾಗಿ ಎಳ್ಳು ಬೆಳೆದ ರೈತ"



ಧೈರ್ಯದ ದಾರಿ

**ಕವಿತಾಳ –:** ಆಣೆಕಟ್ಟು ಗೇಟ್ ಅಳವಡಿಕೆ ಸಲುವಾಗಿ ಈ ಬಾರಿ ಬೇಸಿಗೆ ಬೆಳೆಗೆ ತುಂಗಭದ್ರಾ ಎಡದಂಡೆ ಕಾಲುವೆ ನೀರು ಕಾಣದೆ ಪ್ರತಿ ವರ್ಷ ಎರಡು ಬೆಳೆ ಭತ್ತವನ್ನೆ ಬೆಳೆಯುತ್ತಿದ್ದ ಟಿಬಿ ಡ್ಯಾಮ್ ರೈತರು ಈ ಬಾರಿ ಬೇಸಿಗೆ ಬೆಳೆಯಾಗಿ ಭತ್ತ ಬೆಳೆಯದೆ ಸಾಕಷ್ಟು ರೈತರು ಹೊಲಗಳನ್ನು ಖಾಲಿ ಬಿಟ್ಟಿದ್ದಾರೆ. ಆದರೆ ಇಲ್ಲೊಬ್ಬ ರೈತರು ತಮ್ಮ ಜಮೀನಿನಲ್ಲಿ ಸಾಂಪ್ರದಾಯಿಕ ಭತ್ತದ ಬೆಳೆಗೆ ಪರ್ಯಾಯವಾಗಿ ಎಳ್ಳು ಬೆಳೆಯುವ ಮೂಲಕ ಮಸ್ಕಿ ತಾಲ್ಲೂಕಿನ ಹಾಲಾಪುರ ಗ್ರಾಮದ ರೈತ ಮರಿಗೌಡ ಪಾಟೀಲ ಆರ್ಥಿಕವಾಗಿ ಲಾಭ ಪಡೆದಿದ್ದಾರೆ.

ಜಲಾಶಯಕ್ಕೆ ಕ್ರಸ್ಟ್ ಗೇಟ್ ಅಳವಡಿಕೆ ಹಿನ್ನೆಲೆಯಲ್ಲಿ ತುಂಗಭದ್ರಾ ಎಡದಂಡೆ ಕಾಲುವೆಗೆ ನೀರು ಪೂರೈಸದ ಕಾರಣ ಕಾಲುವೆ ನೀರು ಅವಲಂಬಿಸಿ ವ್ಯವಸಾಯ ಮಾಡುತ್ತಿದ್ದ ರೈತರು ಪ್ರಸಕ್ತ ಬೇಸಿಗೆ ಅವಧಿಯಲ್ಲಿ ಯಾವುದೇ ಬೆಳೆ ಬೆಳೆದಿಲ್ಲ. ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಂಟಾದ ಕಾರಣ ಭತ್ತಕ್ಕೆ ಪರ್ಯಾಯವಾಗಿ ಬೇರೆ ಬೆಳೆಯುವ ಬಗ್ಗೆ ಯೋಚಿಸಿದ ರೈತ ಮರಿಗೌಡ ಪಾಟೀಲ ಸಮೀಪದ ತುಗ್ಗಲದಿನ್ನಿ ಗ್ರಾಮದ ಬಳಿಯ ತಮ್ಮ 2.5 ಎಕರೆ ಸ್ವಂತ ಜಮೀನಿನಲ್ಲಿ ಕರಿ ಎಳ್ಳು ಬಿತ್ತನೆ ಮಾಡಿ ಉತ್ತಮ ಇಳುವರಿ ಪಡೆದಿದ್ದಾರೆ. ಅತ್ಯಂತ ಕಡಿಮೆ ಪ್ರಮಾಣದ ರಸಗೊಬ್ಬರ, ಕ್ರಿಮಿನಾಶಕ ಬಳಕೆ ಸೇರಿದಂತೆ ಕಡಿಮೆ ನಿರ್ವಹಣೆ ವೆಚ್ಚದಲ್ಲಿ ಮೂರು ತಿಂಗಳ ಅವಧಿಯಲ್ಲಿ ಪ್ರತಿ ಎಕರೆ ಪ್ರದೇಶದಲ್ಲಿ ಅಂದಾಜು 6 ಕ್ವಿಂಟಾಲ್ ಎಳ್ಳು ಬೆಳೆದ ಮರಿಗೌಡ ಅವರ ಬಗ್ಗೆ ಸ್ಥಳೀಯ ರೈತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. 2.5 ಎಕರೆ ಜಮೀನಿನಲ್ಲಿ 15 ಕ್ವಿಂಟಾಲ್ ಕರಿ ಎಳ್ಳು ಇಳುವರಿ ಬಂದಿದೆ, ಪ್ರಸ್ತುತ ಮಾರುಕಟ್ಟೆಯಲ್ಲಿ 13 ಸಾವಿರದಂತೆ ಮಾರಾಟವಾಗುತ್ತಿದೆ. ಪ್ರತಿ ಎಕರೆ ಬೆಳೆ ಬೆಳೆಯಲು 10 ಸಾವಿರ ಖರ್ಚಾಗಿದೆ ಅಂದಾಜು 2 ಲಕ್ಷ ಮೊತ್ತದ ಬೆಳೆ ಕೈ ಸೇರಿದೆ. ’ಈ ಭಾಗದಲ್ಲಿ ಬಹುತೇಕ ರೈತರು ಸಾಂಪ್ರದಾಯಿಕ ಭತ್ತ ಬೆಳೆಯುತ್ತಿದ್ದು 2ನೇಪುಟಕ್ಕೆ

ಮೊದಲನೇ ಪುಟದಿಂದ

# ನೀಟ್ ಮರು ಪರೀಕ್ಷೆ: ಸಿಬಿಐ ತನಿಖೆಗೆ ಕೇಂದ್ರ ಆದೇಶ

ರಸಾಯನವಿಜ್ಞಾನ ವಿಭಾಗದ 100ಕ್ಕೂ ಹೆಚ್ಚು ಪ್ರಶ್ನೆಗಳು ಅಸಲಿ ನೀಟ್– ಯುಜಿ ಪ್ರಶ್ನೆಪತ್ರಿಕೆಯ ಪ್ರಶ್ನೆಗಳೊಂದಿಗೆ ಹೋಲಿಕೆ ಹೊಂದಿವೆ ಎನ್ನಲಾಗಿದೆ.

ಇದರಿಂದ ಪ್ರಶ್ನೆಪತ್ರಿಕೆ ಸೋರಿಕೆಯ ಶಂಕೆ ವ್ಯಕ್ತವಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲೂ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ಎನ್‌ಟಿಎ ಪ್ರಕಾರ, ಮೇ 3ರಂದು ನಡೆದ ನೀಟ್ ಪರೀಕ್ಷೆಯನ್ನು ಅತ್ಯಂತ ಕಟ್ಟುನಿಟ್ಟಿನ ಭದ್ರತಾ ವ್ಯವಸ್ಥೆಯಡಿ ನಡೆಸಲಾಗಿದೆ ಪ್ರಶ್ನೆಪತ್ರಿಕೆಗಳನ್ನು ಟ್ರ್ಯಾಕಿಂಗ್ ಹೊಂದಿದ ವಾಹನಗಳಲ್ಲಿ ಸಾಗಿಸಲಾಗಿತ್ತು,ಪರೀಕ್ಷಾ ಕೇಂದ್ರಗಳಲ್ಲಿ ಎಐ ಆಧಾರಿತ ಸಿಸಿಟಿವಿ ನಿಗಾವ್ಯವಸ್ಥೆ ಅಳವಡಿಸಲಾಗಿತ್ತು,ಅಭ್ಯರ್ಥಿಗಳ ಬಯೋಮೆಟ್ರಿಕ್ ಪರಿಶೀಲನೆ ನಡೆಸಲಾಗಿತ್ತು
5ಉ ಜಾಮರ್‌ಗಳನ್ನು ಬಳಸಿ ಎಲೆಕ್ಟ್ರಾನಿಕ್ ಸಂಪರ್ಕ ನಿರ್ಬಂಧಿಸಲಾಗಿತ್ತು,ಪರೀಕ್ಷೆ ಮುಗಿದ ನಾಲ್ಕು ದಿನಗಳ ಬಳಿಕ, ಮೇ 7ರಂದು ಅಕ್ರಮದ ಬಗ್ಗೆ ಮಾಹಿತಿ ಲಭಿಸಿದೆ ಎಂದು ಎನ್‌ಟಿಎ ತಿಳಿಸಿದೆ, ತಕ್ಷಣವೇ ಕೇಂದ್ರ ತನಿಖಾ ಸಂಸ್ಥೆಗಳಿಗೆ ಪರಿಶೀಲನೆ ನಡೆಸುವಂತೆ ಸೂಚಿಸಲಾಗಿದ್ದು, ತನಿಖೆಗೆ ಅಗತ್ಯವಿರುವ ಎಲ್ಲಾ ಪರೀಕ್ಷಾ ದತ್ತಾಂಶ ಮತ್ತು ತಾಂತ್ರಿಕ ನೆರವನ್ನು ಒದಗಿಸಲಾಗುತ್ತಿದೆ ಎಂದು ಎನ್‌ಟಿಎ ಸ್ಪಷ್ಟಪಡಿಸಿದೆ.

ಮರುನೋಂದಣಿ ಅಗತ್ಯವಿಲ್ಲ: ಮರುಪರೀಕ್ಷೆಗೆ ವಿದ್ಯಾರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ ಎಂದು ಎನ್‌ಟಿಎ ಸ್ಪಷ್ಟಪಡಿಸಿದೆ.ಈಗಾಗಲೇ ಸಲ್ಲಿಸಿರುವ ಅರ್ಜಿಗಳು ಮಾನ್ಯವಾಗಿರುತ್ತವೆಆಯ್ಕೆ ಮಾಡಿದ್ದ ಪರೀಕ್ಷಾ ಕೇಂದ್ರಗಳು ಯಥಾಸ್ಥಿತಿಯಲ್ಲಿರುತ್ತವೆಹೆಚ್ಚುವರಿ ಪರೀಕ್ಷಾ ಶುಲ್ಕ ವಿಧಿಸಲಾಗುವುದಿಲ್ಲ
ಈಗಾಗಲೇ ಪಾವತಿಸಿದ ಶುಲ್ಕವನ್ನು ಹಿಂತಿರುಗಿಸಲಾಗುತ್ತದೆ. ಹೊಸ ಪ್ರವೇಶ ಪತ್ರಗಳನ್ನು ನಂತರ ವದಂತಿಗಳಿಗೆ ಕಿವಿಗೊಡಬೇಡಿ.

ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸುಳ್ಳು ಮಾಹಿತಿಗೆ ಕಿವಿಗೊಡದೇ, ಎನ್‌ಟಿಎ ಅಧಿಕೃತ ಪ್ರಕಟಣೆಗಳನ್ನು ಮಾತ್ರ ನಂಬುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಮರುಪರೀಕ್ಷೆಯ ದಿನಾಂಕ ಶೀಘ್ರದಲ್ಲೇ ಪ್ರಕಟವಾಗುವ ಸಾಧ್ಯತೆ ಇರುವುದರಿಂದ ವಿದ್ಯಾರ್ಥಿಗಳು ತಮ್ಮ ಸಿದ್ಧತೆಯನ್ನು ಮುಂದುವರಿಸಬೇಕಾಗಿದೆ.

ಪರೀಕ್ಷಾ ಭದ್ರತೆ ಬಗ್ಗೆ ಮತ್ತೆ ಚರ್ಚೆ: ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಓಇಇಖಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆರೋಪ ಕೇಳಿಬಂದಿರುವುದು ಶಿಕ್ಷಣ ವ್ಯವಸ್ಥೆಯ ಭದ್ರತೆ ಕುರಿತು ಮತ್ತೆ ಆತಂಕ ಮೂಡಿಸಿದೆ. ಪರೀಕ್ಷೆ ರದ್ದು ಮತ್ತು ಸಿಬಿಐ ತನಿಖೆ ಮೂಲಕ ಸರ್ಕಾರ ಅಕ್ರಮಗಳಿಗೆ ಶೂನ್ಯ ಸಹಿಷ್ಣುತೆ ತೋರಿಸಲು ಮುಂದಾಗಿದೆ.

ರಾಜಸ್ಥಾನದಲ್ಲಿ 45ಕ್ಕೂ ಹೆಚ್ಚು ಮಂದಿ ವಶಕ್ಕೆ: ನೀಟ್ ಯುಜಿ 2026 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ತನಿಖೆಯಲ್ಲಿ ರಾಜಸ್ಥಾನದಲ್ಲಿ ಇದುವರೆಗೆ 45ಕ್ಕೂ ಹೆಚ್ಚು ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸೋರಿಕೆಯಾದ 'ಗೆಸ್ ಪೇಪರ್' ಮುದ್ರಣಾಲಯದ ಹಂತದಲ್ಲಿಯೇ ಹೊರಬಂದಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಕೆಲ ಮೂಲಗಳ ಪ್ರಕಾರ, ಪ್ರಶ್ನೆಪತ್ರಿಕೆಯ ಕೈಬರಹ ಪ್ರತಿಗಳು ಪರೀಕ್ಷೆಗೆ ಮುನ್ನವೇ ಹರಿದಾಡಿದ್ದವು ಎನ್ನಲಾಗಿದೆ.
ಈ ಹಿನ್ನೆಲೆಯಲ್ಲಿ ಸಂಘಟಿತ ಅಕ್ರಮ ನಡೆದಿದೆಯೇ ಎಂಬುದನ್ನು ಸಿಬಿಐ ತನಿಖೆ ನಡೆಸಲಿದೆ. ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳು ಮತ್ತು ಮಾಹಿತಿಯನ್ನು ಒದಗಿಸಲು ಎನ್‌ಟಿಎ ಸಹಕರಿಸುವುದಾಗಿ ತಿಳಿಸಿದೆ.

ಮರು ಪರೀಕ್ಷೆ ನಡೆಸಲು ಎನ್‌ಟಿಎ ತೀರ್ಮಾನಿಸಿದೆ. ಹೊಸ ಪರೀಕ್ಷಾ ದಿನಾಂಕವನ್ನು ಶೀಘ್ರದಲ್ಲೇ ಅಧಿಕೃತವಾಗಿ ಪ್ರಕಟಿಸಲಾಗುತ್ತದೆ. ಮರುಪರೀಕ್ಷೆಯಿಂದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ತೊಂದರೆ ಉಂಟಾಗಲಿದೆ ಎಂಬುದನ್ನು ಒಪ್ಪಿಕೊಂಡಿರುವ ಎನ್‌ಟಿಎ, ಅಕ್ರಮದ ನೆರಳಿನಲ್ಲಿರುವ ಪರೀಕ್ಷೆಯನ್ನು ಮಾನ್ಯಗೊಳಿಸುವುದಕ್ಕಿಂತ ಇದು ಉತ್ತಮ ಕ್ರಮ ಎಂದು ಸ್ಪಷ್ಟಪಡಿಸಿದೆ.

# "ಭತ್ತಕ್ಕೆ ಪರ್ಯಾಯವಾಗಿ ಎಳ್ಳು ಬೆಳೆದ ರೈತ"

ಪರ್ಯಾಯವಾಗಿ ಬೇರೆ ಬೆಳೆ ಬೆಳೆಯಲು ಆಸಕ್ತಿ ತೋರುವುದಿಲ್ಲ. ಬೇಸಿಗೆಯಲ್ಲಿ ಕಾಲುವೆ ನೀರು ಇಲ್ಲದ ಕಾರಣ ಮಾದರಿಯಾಗಿ ಬೆಳೆದು ನೋಡುವ ಕುತೂಹಲದಿಂದ ಕರಿ ಎಳ್ಳು ಬಿತ್ತನೆ ಮಾಡಿದ್ದೆ ಇದೀಗ ಉತ್ತಮ ಇಳುವರಿ ಬಂದಿದೆ' ಎಂದು ರೈತ ಮರಿಗೌಡ ಪಾಟೀಲ ಸಂತಸ ವ್ಯಕ್ತಪಡಿಸಿದರು.

'ಸತತ ಒಂದೇ ಬೆಳೆ ಬೆಳೆಯುವುದರಿಂದ ಭೂಮಿಯ ಫಲವತ್ತತೆ ನಾಶವಾಗುತ್ತದೆ ಮಣ್ಣಿನ ಗುಣಧರ್ಮ ಆಧರಿಸಿ ಬೇರೆ ಬೆಳೆ ಬೆಳೆಯುವುದು ಒಳ್ಳೆಯ ಬೆಳವಣಿಗೆ ಈ ಭಾಗದಲ್ಲಿ ಬಹುತೇಕ ಬತ್ತದ ಗದ್ದೆಗಳು ಈ ವರ್ಷ ಬಿಕೊ ಎನ್ನುತ್ತಿವೆ ಮರಿಗೌಡ ಅವರು ಎಳ್ಳು ಬೆಳೆದು ಮಾದರಿಯಾಗಿದ್ದಾರೆ' ಎಂದು ರೈತ ಬಸ್ಸಪ್ಪ ತುಗ್ಗಲದಿನ್ನಿ ಮೆಚ್ಚುಗೆ ವ್ಯಕ್ತಪಡಿಸಿದರು.

# ಗೃಹಲಕ್ಷ್ಮೀ ಹಣ ಸಾಲದ ಖಾತೆಗೆ ಜಮಾ ಮಾಡಿಕೊಳ್ಳದಂತೆ ಎಚ್ಚರ ವಹಿಸಲು ಪಾಮಯ್ಯ ಮುರಾರಿ ಸೂಚನೆ

**ರಾಯಚೂರು ಮೇ.12 :**ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯಡಿ ಮಹಿಳೆಯರ ಖಾತೆಗೆ ಜಮೆಯಾಗುವ ಹಣವನ್ನು ಬ್ಯಾಂಕಗಳು ಸಾಲದ ಖಾತೆಗೆ ಬಲವಂತವಾಗಿ ಜಮಾ ಮಾಡಿಕೊಳ್ಳದಂತೆ ಎಚ್ಚರ ವಹಿಸಬೇಕೆಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.
ಅವರು ಇತ್ತೀಚೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳ ಖಾತೆಗೆ ಜಮಾ ಆದ ಹಣವನ್ನು ಬಲವಂತವಾಗಿ ಅವರ ಸಾಲದ ಖಾತೆಗೆ ಜಮಾ ಅಥವಾ ವರ್ಗಾವಣೆ ಮಾಡಿದರೆ, ಸಂಬಂಧಪಟ್ಟ ಬ್ಯಾಂಕ್ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಕಲಿಸಲಾಗುತ್ತದೆ ಎಂದರು.
ಈಗಾಗಲೇ ಸಾಲಕ್ಕೆ ಮುರಿದುಕೊಂಡಿರುವ ಗೃಹಲಕ್ಷ್ಮಿ ಹಣವನ್ನು ಫಲಾನುಭವಿಗಳ ಎಸ್.ಬಿ ಖಾತೆಗೆ ಹಿಂತಿರುಗಿಸುವಂತೆ ಎಲ್ಲಾ ಬ್ಯಾಂಕಿನ ಜಿಲ್ಲಾ ಸಂಯೋಜಕರಿಗೆ ನಿರ್ದೇಶನ ನೀಡಿದ್ದಾರೆ. ಮತ್ತು ಇಂತಹ ಘಟನೆಗಳು ಪುನರಾವರ್ತಿತಗೊಂಡಲ್ಲಿ ಸಂಬಂಧಪಟ್ಟ ಬ್ಯಾಂಕ್ ಅಧಿಕಾರಿಗಳ ವಿರುದ್ಧ ಎಫ್.ಐ.ಆರ್ ದಾಖಲಿಸುವುದರೊಂದಿಗೆ ಸೂಕ್ತ ಶಿಸ್ತಿನ ಕ್ರಮಕ್ಕೆ ಅವರ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು. ಫಲಾನುಭವಿಗಳು ಈ ಸಂಬಂಧ ದೂರುಗಳಿದ್ದರೆ https://cms.rbi.org.in ಪೋರ್ಟಲ್ ನಲ್ಲಿ ಅಥವಾ 14448 ಸಂಖ್ಯೆಗೆ ಕಾಲ್ ಮಾಡುವ ಮೂಲಕ ದೂರು ದಾಖಲಿಸಬಹುದಾಗಿದೆ. ಹಾಗೂ ವ್ಯವಸ್ಥಾಪಕರು ಜಿಲ್ಲಾ ಅಗ್ರಘನ್ಯ ಬ್ಯಾಂಕ್, ನವೋದಯ ಮೆಡಿಕಲ್ ಕಾಲೇಜ್ ಕ್ಯಾಂಪಸ್, ರಾಯಚೂರು ಇಲ್ಲಿಯೂ ದೂರು ದಾಖಲಿಸಬಹುದು ಎಂದರು.
ಈ ಸಂಬಂಧ ಸೂಚನ ಫಲಕವನ್ನು ಎಲ್ಲಾ ಬ್ಯಾಂಕಗಳಲ್ಲಿ ಕಡ್ಡಾಯವಾಗಿ ಗ್ರಾಹಕರಿಗೆ ಸ್ಪಷ್ಟವಾಗಿ ಕಾಣುವಂತೆ ಅಳವಡಿಸುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನವನ್ನು ಸಭೆಯಲ್ಲಿ ನೀಡಿದ್ದಾರೆ ಎಂದು ಜಿಲ್ಲಾ ಅಗ್ರಘನ್ಯ ಬ್ಯಾಂಕ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂಗಾರ ಹಂಗಾಮಿನ ಜೋಳವನ್ನು ಖರೀದಿ ಮಾಡುವಂತೆ ಒತ್ತಾಯಿಸಿ ಮನವಿ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಬಸವ ವೃತ್ತದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಸಮಿತಿ ವತಿಯಿಂದ ಪ್ರತಿಭಟನೆ ನಡೆಸಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಿಲ್ಲಾ ಉಪನಿರ್ದೇಶಕರಾದ ನಜೀರ್ ಅಹ್ಮದ್ ರವರಿಗೆ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯದರ್ಶಿ ಸೂಗುರಯ್ಯ ಸ್ವಾಮಿ ಆರ್.ಎಸ್.ಮಠ ಮನವಿ ಸಲ್ಲಿಸಿ ಮಾತನಾಡಿ ತಾಲೂಕಿನ ಮುಂಗಾರಿನಲ್ಲಿ ಜೋಳವನ್ನು ಬೆಳೆದ ರೈತರಿಂದ ಖರೀದಿ ಮಾಡಿದ ಜೋಳದ ಹಣವನ್ನು ಕೂಡಲೇ ರೈತರ ಖಾತೆಗೆ ಜಮಾ ಮಾಡಬೇಕು.

ತಾಲೂಕಿನ ಜೋಳ ಖರೀದಿ ಕೇಂದ್ರಗಳಲ್ಲಿ ಹಿಂಗಾರ ಹಂಗಾಮಿನ ಜೋಳವನ್ನು ಖರೀದಿ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು.

ತಾಲೂಕಿನ ಹೆಚ್ಚಿನ ನೈಜ ಜೋಳ ಬೆಳೆಗಾರರ ಎಫ್.ಐ.ಡಿ. ಲಾಕ್ ಮಾಡಲಾಗಿರುವುದರಿಂದ ಜೋಳ ಮಾರಾಟ ಮಾಡುವುದಕ್ಕೆ ಸಾಧ್ಯವಾಗುತ್ತಿಲ್ಲ ಕೂಡಲೇ ರೈತರ ಜಮೀನಿಗೆ ಭೇಟಿ ನೀಡಿ ನೊಂದಾಣಿಯನ್ನು ಅನ್ ಬ್ಲಾಕ್ ಮಾಡಬೇಕು. ಫಸಲ್ ಭೀಮ ಯೋಜನೆಯಡಿಯಲ್ಲಿ ವ್ಯಾಪಕವಾಗಿ ಭ್ರಷ್ಟಚಾರ ನಡೆದಿದು ತನಿಖೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಎಂದು ಒತ್ತಾಯಿಸಿದರು.

ರೈತರಿಂದ ಮನವಿ ಸ್ವಿಕರಿಸಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಿಲ್ಲಾ ಉಪನಿರ್ದೇಶಕರಾದ ನಜೀರ್ ಅಹ್ಮದ್ ಮಾತನಾಡಿ ಕೇಂದ್ರ ಸರಕಾರದಿಂದ ರಾಜ್ಯ ಸರಕಾರಕ್ಕೆ ಮೊದಲನೆ ಹಂತದ ಹಣ ಬಿಡುಗಡೆಯಾಗಿದು ತಾಲೂಕಿನ ಮುಂಗಾರಿನಲ್ಲಿ ಜೋಳವನ್ನು ಬೆಳೆದ ರೈತರಿಂದ ಖರೀದಿ ಮಾಡಿದ ಜೋಳದ ಹಣವನ್ನು ರೈತರ ಖಾತೆಗೆ ಶೀಘ್ರವೇ ಜಮಾ ಮಾಡಲಾಗುವುದು. ತಾಲೂಕಿನಲ್ಲಿ ಹಿಂಗಾರು ಹಂಗಾಮಿನಲ್ಲಿ ಬೆಳೆದ ಜೋಳವನ್ನು ಖರೀದಿ ಕೇಂದ್ರಗಳ ಮೂಲಕ ಖರೀದಿ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಬರವಸೆ ನೀಡಿದರು.

ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ . ಜಿಲ್ಲಾ ಉಗ್ರಾಣ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್, ತಾಲೂಕು ಆಹಾರ ನಿರೀಕ್ಷಕರಾದ ವಿರುಪಣ್ಣ, ಕರ್ನಾಟಕ ರಾಜ್ಯ ರೈತ ಸಂಘದ ತಾ.ಅಧ್ಯಕ್ಷ ಸಿದ್ದಯ್ಯಸ್ವಾಮಿ, ಬಸನಗೌಡ ಬಲ್ಲಟಗಿ, ಯಂಕಪ್ಪ ಕಾರಬಾರಿ, ಲಿಂಗಾರೆಡ್ಡಿ ಪಾಟೀಲ್, ಬಸವರಾಜ ಮಾಲಿಪಾಟೀಲ್, ಬೂದಯ್ಯಸ್ವಾಮಿ, ಚಾಮರಸ ಜಾನೇಕಲ್, ಹೆಚ್.ಶಂಕರಪ್ಪಗೌಡ, ಬಸವರಾಜ ತಡಕಲ್, ಶರಣಪ್ಪ ಗೌಡ ಗವಿಗಟ್ಟ, ದೇವೇಂದ್ರಪ್ಪ,ಚೆನ್ನಾರೆಡ್ಡಿ,ಅಮರೇಶ ಅಲ್ದಾಳ್, ಬಸವಲಿಂಗಯ್ಯ,ಬಸವನಗೌಡ ಬೆಟ್ಟದೂರು, ಅಮರೇಶನಾಯಕ, ನಬಿಸಾಬ್, ಕಲ್ಯಾಣಬಸವ, ನಾಗಪ್ಪ, ಪಂಪಯ್ಯಸ್ವಾಮಿ. ವಿಜಯಕುಮಾರ, ಮಲ್ಲೇಶಗೌಡ, ಸೇರಿದಂತೆ ನೂರಾರು ರೈತರು ಭಾಗವಹಿಸಿದರು.

# ಸರ್ವೋದಯ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಅಂತರಾಷ್ಟ್ರೀಯ ನರ್ಸಿಂಗ್ ದಿನಾಚರಣೆ




ಧೈರ್ಯದ ದಾರಿ

**ಮಾನ್ವಿ:** ಸರ್ವೋದಯ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜು ವತಿಯಿಂದ ಅಂತರಾಷ್ಟ್ರೀಯ ನರ್ಸಿಂಗ್ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮವನ್ನು ವಿದ್ಯಾರ್ಥಿಗಳಲ್ಲಿ ನರ್ಸಿಂಗ್ ವೃತ್ತಿಯ ಮಹತ್ವ, ಸೇವಾ ಮನೋಭಾವ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ನರ್ಸುಗಳ ಪಾತ್ರದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಲಾಗಿತ್ತು.

ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ವಿವಿಧ ರೀತಿಯ ಕ್ರೀಡಾಕೂಟಗಳು, ಮನೋರಂಜನಾ ಕಾರ್ಯಕ್ರಮಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿತ್ತು. ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು.
ಕಾರ್ಯಕ್ರಮದಲ್ಲಿ ಸರ್ವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮನೋಜ್ ಕುಮಾರ್ ಮಿಶ್ರಾ ಅವರು ಮಾತನಾಡಿ, "ನರ್ಸಿಂಗ್ ವೃತ್ತಿ ಮಾನವೀಯ ಸೇವೆಯ ಪ್ರತೀಕವಾಗಿದೆ. ವಿದ್ಯಾರ್ಥಿಗಳು ಸೇವಾ ಮನೋಭಾವದೊಂದಿಗೆ ಸಮಾಜಕ್ಕೆ ಉತ್ತಮ ಆರೋಗ್ಯ ಸೇವೆ ನೀಡಬೇಕು" ಎಂದು ತಿಳಿಸಿದರು.
ಇದೇ ವೇಳೆ ಸರ್ವೋದಯ ಶಿಕ್ಷಣ ಸಂಸ್ಥೆ ಕಾರ್ಯದರ್ಶಿಗಳಾದ ಅನಿಲ್ ಕುಮಾರ್ ಹೆಚ್ ಅವರು ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ಭಾಗವಹಿಸುವುದು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ




ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಪ್ರಥಮ ವರ್ಷದ ವಿದ್ಯಾರ್ಥಿನಿ ಸಾನಿಯಾ (ತಂದೆ: ಮೌಲಾಲಿ) ಅವರು 73 ಪ್ರತಿಶತ ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದರು. ದ್ವಿತೀಯ ವರ್ಷದ ವಿದ್ಯಾರ್ಥಿನಿ ಗೀತಾ (ತಂದೆ: ದುರ್ಗಪ್ಪ) ಅವರು 82 ಪ್ರತಿಶತ ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದರು. ತೃತೀಯ ವರ್ಷದ ವಿದ್ಯಾರ್ಥಿನಿ ಸಾನಿಯಾ (ತಂದೆ: ರುಸ್ತುಮ್ ಪಾಷಾ) ಅವರು 83.75 ಪ್ರತಿಶತ ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಶ್ರೇಣಿ ತಂದು ಹೆಮ್ಮೆ ಈ ಎಲ್ಲಾ ವಿದ್ಯಾರ್ಥಿಗಳನ್ನು ಮನೋಜ್ ಕುಮಾರ್ ಮಿಶ್ರ ಹಾಗೂ ಅನಿಲ್ ಕುಮಾರ್ ಅವರು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಆಡಳಿತ ಅಧಿಕಾರಿ ದತ್ತಾತ್ರೇಯ ಮೇಟಿ ಸರ್ವೋದಯ ಪಿಯು ಕಾಲೇಜಿನ ಪ್ರಾಚಾರ್ಯರು ರೇಣುಕಾ ಶಿಕ್ಷಕ ವೃಂದ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ದಿನಾಚರಣೆಯನ್ನು ಯಶಸ್ವಿಗೊಳಿಸಿದರು. ಕೊನೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ನಡೆಸಲಾಯಿತು.

# ಪ್ರತಿಭೆಗೆ ತಕ್ಕ ಕ್ಷೇತ್ರ ಆಯ್ಕೆಯಿಂದ ಉತ್ತಮ ಸಾಧನೆ ಸಾಧ್ಯ : ಎಡವೆ

**ಔರಾದ್ :ಮೇ.12:** ಪ್ರತಿಭಾವಂತರಿಗೆ ಹಲವು ಕ್ಷೇತ್ರಗಳಲ್ಲಿ ಅವಕಾಶಗಳಿವೆ, ತಮ್ಮ ಪ್ರತಿಭೆಗೆ ತಕ್ಕ ಕ್ಷೇತ್ರ ಆಯ್ಕೆ ಮಾಡಿಕೊಂಡರೆ ಉತ್ತಮ ಸಾಧನೆ ಸಾಧ್ಯ ಎಂದು ಉದ್ಯಮಿ ಅವರ ಎಡವೆ ಹೇಳಿದರು. ಪಟ್ಟಣದ ಘೂಳೆ ಬಡಾವಣೆಯ ಅನುಭವ ಮಂಟಪದಲ್ಲಿ ವಚನ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಡಾ.ಚನ್ನಬಸವ ಪಟ್ಟದೇವರ ವಿದ್ಯಾರ್ಥಿ ನಿಧಿ 2026ನೇ ಸಾಲಿನ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳಿಗೆ ಸಹಕಾರಿಯಾಗುವ ನಿಟ್ಟಿನಲ್ಲಿ ವಚನ ಚಾರಿಟೇಬಲ್ ಟ್ರಸ್ಟ್ ಔರಾದ ಶಾಖೆ ಅದ್ಭುತ ಕಾರ್ಯ ಮಾಡುತ್ತಿದ್ದೆ ವರ್ಷ ಪೂರ್ತಿ ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ, ಧಾರ್ಮಿಕ, ವೈಜ್ಞಾನಿಕ, ವೈಚಾರಿಕ ಕಾರ್ಯಕ್ಕೆ ಕೈ ಜೊಡಿಸುತ್ತಿರುವದು ಶ್ಲಾಘನೀಯ ಕಾರ್ಯ ಎಂದರು.ತಾಲೂಕು ಪಂಚಾಯತ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ ಅವರು ಮಾತನಾಡಿ ತಾಲ್ಲೂಕಿನ ಪ್ರತಿಭಾವಂತ ಮಕ್ಕಳಿಗೆ ಗುರುತಿಸಿ ವಚನ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪ್ರೋತ್ಸಾಹಿಸಿ ನಗದು ಬಹುಮಾನ ನೀಡುತ್ತಿರುವುದು ಶ್ಲಾಘನೀಯ ಎಂದರು.

ವಚನ ಚಾರಿಟೇಬಲ್ ಟ್ರಸ್ಟ್ ಜಿಲ್ಲಾ ಅಧ್ಯಕ್ಷ ಶಿವಶಂಕರ ಟೊಕರೆ ಮಾತನಾಡಿ ವಚನ ಸಂಸ್ಥೆ ಹೊಸ ಪರಿಕಲ್ಪನೆ ಇಟ್ಟುಕೊಂಡು ಜಿಲ್ಲೆಯಲ್ಲಿ ಸುಮಾರು 5 ಸಾವಿರ ಕುಟುಂಬಗಳಿಗೆ ಆರ್ಥಿಕ ಸದೃಢ ನೀಡುತ್ತ ಅನೇಕ ಸಮಾಜಿಕ, ದಾಸೋಹ, ಮಕ್ಕಳ ಶೈಕ್ಷಣಿಕ, ಸಮಾಜದಲ್ಲಿ ನೈತಿಕ ಹೊಣೆಗಾರಿಕೆಯ ಕಾರ್ಯ ಹೇಗೆ ನಿರ್ವಹಿಸಬೇಕು ಎಂಬುದನ್ನು ವಚನ ಸಂಸ್ಥೆ ಮಾಡುತ್ತಿದೆ, ಆಶ್ರಯ ಇಲ್ಲದ ಪ್ರತಿಭಾವಂತ ಮಕ್ಕಳಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ನಮ್ಮ ಸಂಸ್ಥೆ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಧನ ಸಹಾಯ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸುತ್ತಿದ್ದೆವೆ ಎಂದು ಹೇಳಿದರು. ವಚನ ಸಮೂಹ ಸಂಸ್ಥೆಯ ಮುಖ್ಯಸ್ಥ ಅಲ್ಲಮಪ್ರಭು ನಾವದಗೀರೆ, ತಾಲೂಕು ಅಧ್ಯಕ್ಷ ಡಿಡಿ ಬೊಳೆಗಾವೆ ಮಾತನಾಡಿದರು. ಈ ಸಂದರ್ಭದಲ್ಲಿ ಅಮರೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ ಪ್ರೇಮಾ ಹೂಗಾರ, ವಚನ ಸಂಸ್ಥೆಯ ಪ್ರಮುಖರಾದ ಪ್ರಕಾಶ ಗಂದಿಗುಡೆ, ಮಲ್ಲಿಕಾರ್ಜುನ ಟಂಕಸಾಲೆ, ಜಗನಾಥ ಮೂಲಗೆ, ಸೂರ್ಯಕಾಂತ ವಲ್ಲೆಪೂರೆ, ಶಿವರಾಜ ಶೆಟಕಾರ, ಮಲ್ಲಿಕಾರ್ಜುನ ಹಿಪ್ಪಳಗಾವೆ, ಗಜಾನನ ಮಳ್ಳಾ, ಧನರಾಜ ಪೀಟ್ರೆ, ಸತೀಷ ಮಜಗೆ, ಮಹಾನಂದ ಎಂಡೆ, ಗುರುರಾಜ ಯಾದವ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ವಿದ್ಯಾರ್ಥಿ ನಿಧಿ ಆಯ್ಕೆಗೊಂಡವರು

ಸಿದ್ದಮ್ಮಾ ಬಸಪ್ಪಾ, ಸಿದ್ಧರಾಮೇಶ್ವರ ಕಾಲೇಜು ಔರಾದ
ವಚನಶ್ರೀ ವಿಜಯಕುಮಾರ ಆದರ್ಶ ಶಾಲೆ ಔರಾದ
ಸಂಜನಾ ಸಂತೋಷ ಬಿರಾದಾರ ಪತ್ರಿಸ್ವಾಮಿ ಕಾಲೇಜು ಔರಾದ
ಗುರುಬಸವ ಚಂದ್ರಕಾಂತ ನವಚೇತನ ಗುರುಕುಲ ಔರಾದ
ಶೇಖರ ಹಣಮಂತ ಸರ್.ಎಂ.ವಿಶ್ವೇಶ್ವರಯ್ಯ ಶಾಲೆ ಔರಾದ
ಅಂಬಿಕಾ ರಾಜಕುಮಾರ ಸ.ಪ್ರೌ.ಶಾಲೆ ಧೂಪತಮಾಹಾಗಾಂವ
ಅಸ್ಮಿತಾ ಶಾಮಸುಂದರ ಆದರ್ಶ ಶಾಲೆ ಔರಾದ
ಅಪೂರ್ವ ಮಾರುತಿ ಸ.ಪ್ರೌ.ಶಾ ಯನಗುಂದಾ
ಭಾಗ್ಯವತಿ ಅಶೋಕ ಸ.ಪ್ರೌ. ಶಾಲೆ ಏಕಲಾರ
ಅನುಷ್ಕಾ ರಾಮಣ್ಣ ಸುಭಾಷ್ ಚಂದ್ರಭೋಸ ಶಾಲೆ
ಡಾ. ಚನ್ನಬಸವಪಟ್ಟದೇವರ ವಿದ್ಯಾರ್ಥಿ ನಿಧಿ ಸ್ಥಾಪನೆ

ತಾಲ್ಲೂಕಿನ ಸಮಾನ ಮನಸ್ಕರು ಸೇರಿ ಸಾಮಾಜಿಕ, ಶೈಕ್ಷಣಿಕ, ಹಾಗೇ ವೈಜ್ಞಾನಿಕ, ವೈಚಾರಿಕ ವಿಚಾರಧಾರೆ ಬಿತ್ತುವ ಉದ್ದೇಶದಿಂದ ಪ್ರತಿಯೊಬ್ಬರು ತಿಂಗಳಿಗೆ ಐದು ನೂರು ಜಮಾ ಮಾಡಿ, ಈ ಹಣದಿಂದಲೇ ಇಂತಹ ಸಮಾಜಮುಖಿ ಕಾರ್ಯ ಮಾಡುತ್ತಿದ್ದೇವೆ. ಪ್ರತಿ ವರ್ಷ ವಿದ್ಯಾರ್ಥಿಗಳಿಗೆ ಪ್ರೇರಣೆ ಆಗಲಿ ಎನ್ನುವ ಉದ್ದೇಶದಿಂದ ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದಿರುವ ಭಾಲ್ಕಿಯ ಪೂಜ್ಯ ಡಾ. ಚನ್ನಬಸವ ಪಟ್ಟದ್ದೇವರ ವಿದ್ಯಾರ್ಥಿ ನಿಧಿ ಎಂದು ಹೆಸರಿಡಲಾಗಿದೆ. ಇನ್ನೂ ಮುಂದೆ ಪ್ರತಿವರ್ಷ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲಾಗುವುದು.
ಡಿ.ಡಿ.ಬೋಳೆಗಾವೆ
ತಾಲೂಕ ಅಧ್ಯಕ್ಷರು ಔರಾದ

# ತೈಲ ದರ ತಗ್ಗಿಸಿ: ಮೋದಿ ಕರೆಗೆ ಆನಂದ್ ಟೀಕೆ



**ಬೆಂಗಳೂರು,ಮೇ.12:** "ಚಿನ್ನ ಖರೀದಿ ಬೇಡ, ತೈಲ ಬಳಕೆ ತಗ್ಗಿಸಿ" ಎಂದು ಪ್ರಧಾನಿ ನರೇಂದ್ರ ಮೋದಿ ನೀಡಿರುವ ಕರೆ ಅತ್ಯಂತ ಬಾಲಿಶವಾದದ್ದು. ಜನರ ಖರೀದಿ ಸ್ವಾತಂತ್ರ್ಯ, ಮಾರುಕಟ್ಟೆ ಆಧಾರಿತ ಬೆಲೆ ನಿರ್ಧಾರ ಮತ್ತು ದೀರ್ಘಕಾಲೀನ ಹೂಡಿಕೆಗಳಿಗೆ ಇದು ವಿರುದ್ಧವಾಗಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮೋದಿಯವರ ಈ ಕರೆ ಜನರ ಬದುಕಿನ ವಾಸ್ತವಿಕತೆಗಳನ್ನು ಗಮನಿಸದೇ ಕೇವಲ ರಾಜಕೀಯ ಪ್ರದರ್ಶನದಂತೆ ತೋರುತ್ತದೆ. ಜನರಿಗೆ ಪರ್ಯಾಯ ವ್ಯವಸ್ಥೆಗಳನ್ನು ಒದಗಿಸದೆ "ಬಳಕೆ ಕಡಿಮೆ ಮಾಡಿ" ಎಂದು ಹೇಳಿಕೆ ನೀಡುವುದು ಹೊಣೆಗಾರಿಕೆಯ ಕೊರತೆಯ ಸಂಕೇತವಾಗಿದೆ. ಜಾಗತಿಕ ಆರ್ಥಿಕ ಕುಸಿತ ತಡೆದ ಡಾ. ಮನಮೋಹನ್ ಸಿಂಗ್ ರೂಪಿಸಿದ ಆರ್ಥಿಕ ತತ್ವಗಳಿಗೆ ಇದು ವಿರುದ್ಧವಾಗಿದೆ. 1991 ರಲ್ಲಿ ದೇಶ ಎದುರಿಸುತ್ತಿದ್ದ ಆರ್ಥಿಕ ಸಂಕಷ್ಟ ಸಂದರ್ಭದಲ್ಲಿ ಮನಮೋಹನ್ ಸಿಂಗ್ ಅವರ ಆರ್ಥಿಕ ನೀತಿ ದೇಶವನ್ನು ಗಂಡಾಂತರದಿಂದ ಪಾರು ಮಾಡಿತು. 2008 ರ ಜಾಗತಿಕ ಆರ್ಥಿಕ ಹಿಂಜರಿಕೆ ಸಂದರ್ಭದಲ್ಲಿ ದೇಶಕ್ಕೆ ಸ್ವಲ್ಪವೂ ತೊಂದರೆಯಾಗದಂತೆ ರಕ್ಷಿಸಿದ್ದರು. ಆದರೆ ಮೋದಿ ಅವರ ಕರೆ ಜನರ ಮೂಲಭೂತ ಹಕ್ಕುಗಳಿಗೆ ವಿರುದ್ಧವಾಗಿವೆ ಎಂದು ಆರೋಪಿಸಿದ್ದಾರೆ.

ಇದು ಜನರ ಖಾಸಗಿ ಖರ್ಚುಗಳನ್ನು ನಿಯಂತ್ರಿಸುವ ಪ್ರಯತ್ನವಾಗಿದೆ. ಜಾಗತಿಕ ತೈಲ ಬೆಲೆ ಏರಿಕೆ, ವಿದೇಶಿ ವಿನಿಮಯ ಸಂಗ್ರಹದ ಒತ್ತಡವನ್ನು ನಿಯಂತ್ರಿಸಲು ಸಾಕಷ್ಟು ಮಾರ್ಗಗಳಿವೆ. ಮನಮೋಹನ್ ಸಿಂಗ್ ಅವರು ಜನರ ಖರೀದಿ ಸ್ವಾತಂತ್ರ್ಯಕ್ಕೆ ಉತ್ತೇಜನ ನೀಡಿ ಮಾರುಕಟ್ಟೆಯಲ್ಲಿ ಹಣ ಹರಿಯಲು ಒತ್ತು ನೀಡಿದ್ದರು. ಒಂದು ವರ್ಷ ಚಿನ್ನ ಖರೀದಿ ಬೇಡ ಎಂದು ಕರೆ ನೀಡಿರುವುದು ಚಿನ್ನದ ಆಮದಿಂದ ಭಾರತಕ್ಕೆ ದೊಡ್ಡ ವಿದೇಶಿ ವಿನಿಮಯ ಹೊರೆಯಾಗಲಿದೆ. ಆದರೆ ಸಿಂಗ್ ಅವರ ದೃಷ್ಟಿಕೋನದಲ್ಲಿ ಚಿನ್ನ ಖರೀದಿ ಜನರ ಹೂಡಿಕೆ ಸ್ವಾತಂತ್ರ್ಯದ ಭಾಗ. ಸರ್ಕಾರವು ಜನರ ಖಾಸಗಿ ಹೂಡಿಕೆಗಳನ್ನು ನಿಯಂತ್ರಿಸುವ ಬದಲು, ಆರ್ಥಿಕತೆಯನ್ನು ಬಲಪಡಿಸುವ ಮೂಲಕ ವಿದೇಶಿ ವಿನಿಮಯ ಒತ್ತಡವನ್ನು ತಗ್ಗಿಸಬೇಕು ಎಂದು ಡಾ. ಆನಂದ ಕುಮಾರ್ ಕಿವಿ ಮಾತು ಹೇಳಿದ್ದಾರೆ.

# ಬೂದಿಹಾಳ– ಪೀರಾಪೂರ ಏತ ನೀರಾವರಿ ಯೋಜನೆ ನೆನೆಗುದಿಗೆ: ರೈತ ಸಂಘ ಆಕ್ರೋಶ



**ವಿಜಯಪುರ, ಮೇ. 12 :** ಬೂದಿಹಾಳ : ಪೀರಾಪೂರ ಏತ ನೀರಾವರಿ ಯೋಜನೆಯ ಬಾಕಿ ಉಳಿದ ಕಾಮಗಾರಿ ನೆನೆಗುದಿಗೆ ಬಿದ್ದಿದ್ದು ಧರಣಿ ಸಂದರ್ಭದಲ್ಲಿ ನೀಡಿದ ಭರವಸೆ ಕೇವಲ ಮೂಗಿಗೆ ತುಪ್ಪ ಸವರಿ ಹೋದಂತಾಗಿದೆ. ಅವರು ಕೊಟ್ಟ ಮಾತು ಉಳಿಸಿಕೊಳ್ಳಲು ವಿಫಲರಾಗಿದ್ದಾರೆ. ಇವರು ಕೇವಲ ಭರವಸೆ ನೀಡುತ್ತಾ ರೈತರಿಗೆ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹಾಗೂ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗುರುರಾಜ ಪಡಶೆಟ್ಟಿ ಸಚಿವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಜಂಟಿ ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ಹೊರಹಾಕಿದ ಉಭಯ ರೈತ ಮುಖಂಡರು ಯೋಜನೆಗೆ ಸಂಬಂಧಿಸಿದ ಪೀರಾಪೂರ ಏತ ನೀರಾವರಿ ಯೋಜನೆ ಬಾಕಿ ಉಳಿದ ಕಿರು ಕಾಲುವೆ (ಎಫ್.ಐ.ಸಿ) ಕಾಮಗಾರಿಯನ್ನು ಶೀಘ್ರದಲ್ಲಿ ಮುಕ್ತಾಯಗೊಳಿಸಿ ಪ್ರತಿಯೊಬ್ಬ ರೈತನ ಜಮೀನಿಗೆ ನೀರು ಒದಗಿಸಬೇಕು ಎಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಕಳೆದ 2025 ರಿಂದ ತಾಳಿಕೋಟೆ ತಾಲೂಕಿನ ಕೊಡಗಾನೂರ ಕ್ರಾಸ್ ಬಳಿ 38 ಹಳ್ಳಿಗಳ ರೈತರೊಂದಿಗೆ 12 ದಿನಗಳವರೆಗೆ ಧರಣಿ ಹಮ್ಮಿಕೊಳ್ಳಲಾಗಿತ್ತು. ಧರಣಿ ಸ್ಥಳಕ್ಕೆ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲರು ಆಗಮಿಸಿ ಬೂದಿಹಾಳ–ಪೀರಾಪೂರ ಏತ ನೀರಾವರಿ ಯೋಜನೆ ಶೀಘ್ರದಲ್ಲಿ ಮುಕ್ತಾಯಗೊಳಿಸಲಾಗುವದೆಂದು ಧರಣಿ ನಿರತ ರೈತರಿಗೆ ಮಾತು ಕೊಟ್ಟಿದ್ದರು. ಕೊಟ್ಟ ಮಾತಿನಂತೆ ನಡೆದುಕೊಳ್ಳದೆ ಮೌನವಾಗಿದ್ದಾರೆ ಎಂದರು.

ತಾಳಿಕೋಟೆ ಭಾಗದ ಅಸ್ಕಿ, ನೀರಲಗಿ, ಬೆಕಿನಾಳ, ಜಲಪೂರ, ಬೆನ್ನಟ್ಟಿ, ಬೂದಿಹಾಳ, ಹಾಳಗುಂಡಕನಾಳ, ರಾಂಪೂರ, ವಣಕಿಹಾಳ, ತುರಕನಕೇರಿ ಸೇರಿ 38 ಗ್ರಾಮಗಳಲ್ಲಿ ನೀರಿನ ಭವಣೆ ಗಂಭೀರವಾಗಿದೆ. ಜನ ಹಾಗೂ ಜಾನುವಾರುಗಳಿಗೆ ಕುಡಿಯಲು ನೀರು ಇಲ್ಲದಂತಾಗಿವೆ. ಕೃಷಿಗೂ ಕೂಡ ನೀರಿಲ್ಲ. ಅಂದಾಜು 4–5 ಕಿಲೋ ಮೀಟರ್ ವರೆಗೆ ನೀರು ಇದ್ದಲ್ಲಿ ಹುಡುಕಿಕೊಂಡು ಹೋಗಿ ನೀರು ತರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಸಿದ್ದಾಪೂರ ಈ ಯೋಜನೆ ಪೂರ್ಣಗೊಂಡರೆ 50,657 ಎಕರೆ ಜಮೀನು ನೀರಾವರಿಗೆ ಒಳಪಡುತ್ತದೆ. ಹಿಂದಿನ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೋಮ್ಮಾಯಿಯವರು ಈ ಯೋಜನೆಯ 1ನೇ ಹಂತದ ಉದ್ಘಾಟನೆ ಮಾಡಿ 2ನೇ ಹಂತದ ಶಂಕು ಸ್ಥಾಪನೆ ನೆರವೇರಿಸಿದ್ದರು. ಆದರೆ ಇಲ್ಲಿಯವರೆಗೂ ಕಾಮಗಾರಿ ಪೂರ್ಣಗೊಳ್ಳಲಿಲ್ಲ. ಈಗಾಗಲೇ ಶೇ.90 ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ಇನ್ನು ಕೇವಲ ಸ್ವಲ್ಪ ಶೇ. 10ರಷ್ಟು ಪ್ರಮಾಣದಲ್ಲಿ ಕಾಮಗಾರಿ ಉಳಿದಿದ್ದು ಕೇವಲ ಅದಕ್ಕೆ 200 ಕೋಟಿ ಅನುದಾನದ ಅವಶ್ಯಕತೆ ಇದೆ. 38 ಹಳ್ಳಿಗಳಿಗೆ 40 ರಿಂದ 80 ಎಕರೆಗೆ 1ರಂತೆ ಔಟಲೆಟ್ ಕೂಡಿಸಿದ್ದಾರೆ. ಒಟ್ಟು 1200 ಔಟ್‌ಲೆಟ್ ಬಾಕ್ಸ್ ಗಳನ್ನು ಜಮೀನಿನಲ್ಲಿ ಅಳವಡಿಸಲಾಗಿದೆ. ಇನ್ನು ಬಾಕಿ ಉಳಿದ ಕಾಮಗಾರಿ ಮುಕ್ತಾಯಗೊಳಿಸಲು 200 ಕೋಟಿ ಹಣ ಸರ್ಕಾರಕ್ಕೆ ಏನು ಹೊರೆಯಲ್ಲ. ಆದ ಕಾರಣ ಕೂಡಲೇ ಅನುದಾನ ಬಿಡುಗಡೆ ಮಾಡಿ ಬಾಕಿ ಉಳಿದ ಕಾಮಗಾರಿ ಮುಕ್ತಾಯಗೊಳಿಸಬೇಕು ಇಲ್ಲದಿದ್ದರೆ ಮತ್ತೆ ತಾಳಿಕೋಟಿ ಹಾಗೂ ದೇವರ ಹಿಪ್ಪರಗಿ ಮತಕ್ಷೇತ್ರದ ವ್ಯಾಪ್ತಿಗೆ ಬರುವ 38 ಹಳ್ಳಿಗಳ ರೈತರೊಂದಿಗೆ ಸಭೆ ಸೇರಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಬೇಕಾಗುತ್ತದೆ ಎಂದರು.

ರೈತ ಮುಖಂಡರಾದ ಎಂ.ಜಿ. ಯಂಕಂಚಿ ಮಾತನಾಡಿದರು.

ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ಬಸವನ ಬಾಗೇವಾಡಿ ತಾಲೂಕಾ ಉಪಾಧ್ಯಕ್ಷ ಹೊನಕೇರೆಪ್ಪ ತೆಲಗಿ, ಕರ್ನಾಟಕ ರಾಜ್ಯ ರೈತ ಸಂಘದ ವಿಜಯಪುರ ತಾಲೂಕಾಧ್ಯಕ್ಷ ಮಹಾದೇವಪ್ಪ ತೇಲಿ, ಶ್ರೀಶೈಲ ತಾಳಿಕೋಟಿ, ದತ್ತಾತ್ರೇಯ ಕುಲಕರ್ಣಿ, ಅರವಿಂದ ತೇಲಿ, ಗುರುನಾಥ ಬಾಗೇವಾಡಿ ಉಪಸ್ಥಿತರಿದ್ದರು.

# ಕ್ರಿಕೆಟ್ ಪ್ರೇಮಿ ಅಬ್ದುಲ್ ಹಫೀಜ್ ಮೌನ ಕ್ರಾಂತಿ :ಎಲೆ ಮರೆ ಕಾಯಿಯಂತೆ ಸಮಾಜ ಸೇವೆ




**ಸೇಡಂ,ಮೇ,12:**ಸಮಾಜದಲ್ಲಿ ಹಲವಾರು ಜನರು ಪ್ರಚಾರ, ಹೆಸರಿಗಾಗಿ ಸೇವೆ ಮಾಡುವುದನ್ನು ನಾವು ನೋಡುತ್ತೇವೆ. ಆದರೆ ಕೆಲವರು ಮಾತ್ರ ಶಾಂತವಾಗಿ, ಯಾವುದೇ ಪ್ರಸಿದ್ಧಿ ಬೇಡದೆ, ತಮ್ಮ ಸೇವೆಯನ್ನು ಮುಂದುವರಿಸುತ್ತಾರೆ. ಅಂತಹವರಲ್ಲಿ ಅಬ್ದುಲ್ ಹಫೀಜ್ ಅವರು ಪ್ರಮುಖರು. ಅವರ ಸಮಾಜ ಸೇವೆ ನಿಜವಾಗಿಯೂ "ಎಲೆ ಮರೆ ಕಾಯಿಯಂತೆ" ಎಂದರೆ ಸರಿಹೊಂದುತ್ತದೆ. ಯುವ ಉದ್ಯಮಿಗಳು ಕ್ರಿಕೆಟ್ ಪ್ರೇಮಿ ಸಮಾಜ ಸುಧಾರಕ

ಅಬ್ದುಲ್ ಹಫೀಜ್ ಆರ್ ರಂಜೋಳ ಅವರು ಬಡವರ ನೆರವಿಗೆ ಸದಾ ಸಿದ್ಧರಾಗಿರುವ ವ್ಯಕ್ತಿ. ಸಮಾಜದ ಹಿಂದುಳಿದ ವರ್ಗಗಳಿಗೆ ಶಿಕ್ಷಣ, ಆರೋಗ್ಯ, ಮತ್ತು ಜೀವನೋಪಾಯದ ನೆರವು ನೀಡುವಲ್ಲಿ ಅವರು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅನೇಕ ಬಾರಿ ತಮ್ಮ ವೈಯಕ್ತಿಕ ಸಂಪನ್ಮೂಲಗಳನ್ನು ಬಳಸಿಕೊಂಡು ಸಂಕಷ್ಟದಲ್ಲಿರುವವರಿಗೆ ಸಹಾಯ ಮಾಡಿದ್ದಾರೆ.ಕೋವಿಡ್ ಸಮಯದಲ್ಲಿಯೂ ಹಲವರು ಹಿಂದೆ ಸರಿದಾಗ, ಅವರು ಮುಂದೆ ಬಂದು ಅಗತ್ಯವಿರುವವರಿಗೆ ಆಹಾರ, ಔಷಧಿ ಮತ್ತು ಆರ್ಥಿಕ ಸಹಾಯವನ್ನು ಒದಗಿಸಿದ ಉದಾಹರಣೆಗಳು ಗಮನಾರ್ಹ. ಈ ರೀತಿಯ ಸಮಾಜ ಸೇವೆ ಜನರ ಬದುಕಿನಲ್ಲಿ ದೊಡ್ಡ ಬದಲಾವಣೆಯನ್ನು ತಂದಿದೆ.ಸಾಮಾನ್ಯವಾಗಿ ಇಂತಹ ಸೇವೆಗಳು ದೊಡ್ಡ ಸಂಘಟನೆಗಳ ಮೂಲಕ ನಡೆಯುತ್ತವೆ. ಆದರೆ ಕೆಲವೊಮ್ಮೆ ಒಬ್ಬ ವ್ಯಕ್ತಿಯ ಸತ್ಸಂಕಲ್ಪವೂ ದೊಡ್ಡ ಪರಿಣಾಮವನ್ನು ಉಂಟುಮಾಡಬಹುದು. ಭಾರತದಲ್ಲಿಯೂ ಹಲವು ಸಮಾಜ ಸೇವಾ ಸಂಸ್ಥೆಗಳು ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿವೆ ಎಂಬುದಕ್ಕೆ ಉದಾಹರಣೆಗಳಿವೆ.ಅಬ್ದುಲ್ ಹಫೀಜ್ ಆರ್ ಆರ್ ಅವರಂತಹ ವ್ಯಕ್ತಿಗಳು ಸಮಾಜಕ್ಕೆ ಸ್ಫೂರ್ತಿ. ಎಲೆ ಮರೆ ಕಾಯಿಯಂತೆ ನಿಸ್ವಾರ್ಥವಾಗಿ ನಡೆಯುವ ಸೇವೆಯೇ ನಿಜವಾದ ಮಾನವೀಯತೆ. ಇಂತಹವರನ್ನು ಗುರುತಿಸಿ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.

ಇನ್ನು ಯಾವ ಅಧಿಕಾರವಿಲ್ಲದೆಯೇ ಇಷ್ಟೊಂದು ಕೆಲಸಗಳು ಮಾಡುವ ಹಫೀಜ್ ಅವರು ರಾಜಕೀಯಕ್ಕೆ ಬಂದು ನಿರ್ದಿಷ್ಟ ಜನರಿಗಲ್ಲದೇ ಸಾಕಷ್ಟು ಜನರ ಸೇವೆಯಲ್ಲಿ ತೊಡಗಬಹುದು ಎಂದು ಅವರ ಸಹಪಾಠಿಗಳು ಆಶಯ ವ್ಯಕ್ತಪಡಿಸಿದ್ದಾರೆ.

# ತೈಲ ದರ ತಗ್ಗಿಸಿ: ಮೋದಿ ಕರೆಗೆ ಆನಂದ್ ಟೀಕೆ




**ಬೆಂಗಳೂರು,ಮೇ.12:** "ಚಿನ್ನ ಖರೀದಿ ಬೇಡ, ತೈಲ ಬಳಕೆ ತಗ್ಗಿಸಿ" ಎಂದು ಪ್ರಧಾನಿ ನರೇಂದ್ರ ಮೋದಿ ನೀಡಿರುವ ಕರೆ ಅತ್ಯಂತ ಬಾಲಿಶವಾದದ್ದು. ಜನರ ಖರೀದಿ ಸ್ವಾತಂತ್ರ್ಯ, ಮಾರುಕಟ್ಟೆ ಆಧಾರಿತ ಬೆಲೆ ನಿರ್ಧಾರ ಮತ್ತು ದೀರ್ಘಕಾಲೀನ ಹೂಡಿಕೆಗಳಿಗೆ ಇದು ವಿರುದ್ಧವಾಗಿದೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮೋದಿಯವರ ಈ ಕರೆ ಜನರ ಬದುಕಿನ ವಾಸ್ತವಿಕತೆಗಳನ್ನು ಗಮನಿಸದೇ ಕೇವಲ ರಾಜಕೀಯ ಪ್ರದರ್ಶನದಂತೆ ತೋರುತ್ತದೆ. ಜನರಿಗೆ ಪರ್ಯಾಯ ವ್ಯವಸ್ಥೆಗಳನ್ನು ಒದಗಿಸದೆ "ಬಳಕೆ ಕಡಿಮೆ ಮಾಡಿ" ಎಂದು ಹೇಳಿಕೆ ನೀಡುವುದು ಹೊಣೆಗಾರಿಕೆಯ ಕೊರತೆಯ ಸಂಕೇತವಾಗಿದೆ. ಜಾಗತಿಕ ಆರ್ಥಿಕ ಕುಸಿತ ತಡೆದ ಡಾ. ಮನಮೋಹನ್ ಸಿಂಗ್ ರೂಪಿಸಿದ ಆರ್ಥಿಕ ತತ್ವಗಳಿಗೆ ಇದು ವಿರುದ್ಧವಾಗಿದೆ. 1991 ರಲ್ಲಿ ದೇಶ ಎದುರಿಸುತ್ತಿದ್ದ ಆರ್ಥಿಕ ಸಂಕಷ್ಟ ಸಂದರ್ಭದಲ್ಲಿ ಮನಮೋಹನ್ ಸಿಂಗ್ ಅವರ ಆರ್ಥಿಕ ನೀತಿ ದೇಶವನ್ನು ಗಂಡಾಂತರದಿಂದ ಪಾರು ಮಾಡಿತು. 2008 ರ ಜಾಗತಿಕ ಆರ್ಥಿಕ ಹಿಂಜರಿಕೆ ಸಂದರ್ಭದಲ್ಲಿ ದೇಶಕ್ಕೆ ಸ್ವಲ್ಪವೂ ತೊಂದರೆಯಾಗದಂತೆ ರಕ್ಷಿಸಿದ್ದರು. ಆದರೆ ಮೋದಿ ಅವರ ಕರೆ ಜನರ ಮೂಲಭೂತ ಹಕ್ಕುಗಳಿಗೆ ವಿರುದ್ಧವಾಗಿವೆ ಎಂದು ಆರೋಪಿಸಿದ್ದಾರೆ.

ಇದು ಜನರ ಖಾಸಗಿ ಖರ್ಚುಗಳನ್ನು ನಿಯಂತ್ರಿಸುವ ಪ್ರಯತ್ನವಾಗಿದೆ. ಜಾಗತಿಕ ತೈಲ ಬೆಲೆ ಏರಿಕೆ, ವಿದೇಶಿ ವಿನಿಮಯ ಸಂಗ್ರಹದ ಒತ್ತಡವನ್ನು ನಿಯಂತ್ರಿಸಲು ಸಾಕಷ್ಟು ಮಾರ್ಗಗಳಿವೆ. ಮನಮೋಹನ್ ಸಿಂಗ್ ಅವರು ಜನರ ಖರೀದಿ ಸ್ವಾತಂತ್ರ್ಯಕ್ಕೆ ಉತ್ತೇಜನ ನೀಡಿ ಮಾರುಕಟ್ಟೆಯಲ್ಲಿ ಹಣ ಹರಿಯಲು ಒತ್ತು ನೀಡಿದ್ದರು. ಒಂದು ವರ್ಷ ಚಿನ್ನ ಖರೀದಿ ಬೇಡ ಎಂದು ಕರೆ ನೀಡಿರುವುದು ಚಿನ್ನದ ಆಮದಿಂದ ಭಾರತಕ್ಕೆ ದೊಡ್ಡ ವಿದೇಶಿ ವಿನಿಮಯ ಹೊರೆಯಾಗಲಿದೆ. ಆದರೆ ಸಿಂಗ್ ಅವರ ದೃಷ್ಟಿಕೋನದಲ್ಲಿ ಚಿನ್ನ ಖರೀದಿ ಜನರ ಹೂಡಿಕೆ ಸ್ವಾತಂತ್ರ್ಯದ ಭಾಗ. ಸರ್ಕಾರವು ಜನರ ಖಾಸಗಿ ಹೂಡಿಕೆಗಳನ್ನು ನಿಯಂತ್ರಿಸುವ ಬದಲು, ಆರ್ಥಿಕತೆಯನ್ನು ಬಲಪಡಿಸುವ ಮೂಲಕ ವಿದೇಶಿ ವಿನಿಮಯ ಒತ್ತಡವನ್ನು ತಗ್ಗಿಸಬೇಕು ಎಂದು ಡಾ. ಆನಂದ ಕುಮಾರ್ ಕಿವಿ ಮಾತು ಹೇಳಿದ್ದಾರೆ.

# ಜಮಖಂಡಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಐತಿಹಾಸಿಕ ದಾಖಲೆಶೇ.95.85 ಫಲಿತಾಂಶ, ರಾಜ್ಯ ಮಟ್ಟದಲ್ಲಿ 18 ರ್‍ಯಾಂಕ್!



**ಜಮಖಂಡಿ : ಮೇ 12:**ಜಮಖಂಡಿ ಅಖಂಡ ತಾಲೂಕಿನಲ್ಲಿ ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಐತಿಹಾಸಿಕ ದಾಖಲೆ ನಿರ್ಮಿಸಿದ್ದು, ಒಟ್ಟು 7,777 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರಲ್ಲಿ ಶೇ.95.85 ಫಲಿತಾಂಶ ದಾಖಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಅಶೋಕ್ ಬಸವಣ್ಣ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಶಿಕ್ಷಣ ಇಲಾಖೆ ಆರಂಭವಾದ ಬಳಿಕ ಇಷ್ಟೊಂದು ಪ್ರಮಾಣದ ಫಲಿತಾಂಶ ಇದೇ ಮೊದಲ ಬಾರಿಗೆ ದಾಖಲಾಗಿದ್ದು, ಇದು ತಾಲೂಕಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಈ ಯಶಸ್ಸಿಗೆ ಕಾರಣಕರ್ತರಾಗಿರುವ ಶಿಕ್ಷಕರು, ಮುಖ್ಯೋಪಾಧ್ಯಾಯರು, ಶಿಕ್ಷಣ ಇಲಾಖೆ ಸಿಬ್ಬಂದಿ ಹಾಗೂ ಪಾಲಕರಿಗೆ ಅಭಿನಂದನೆ ಸಲ್ಲಿಸಿದ ಅವರು, ಈ ವರ್ಷ ವಿಶೇಷವಾಗಿ 253 ವಿದ್ಯಾರ್ಥಿಗಳು 95ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ ಎಂದು ತಿಳಿಸಿದರು.

ರಾಜ್ಯ ಮಟ್ಟದಲ್ಲಿಯೂ ಜಮಖಂಡಿ ತಾಲೂಕಿನ 18 ವಿದ್ಯಾರ್ಥಿಗಳು ರ್‍ಯಾಂಕ್ ಗಳನ್ನು ಪಡೆದು ತಾಲೂಕಿಗೆ ಕೀರ್ತಿ ತಂದಿದ್ದಾರೆ. ರಾಜ್ಯಕ್ಕೆ 5ನೇ ರ್‍ಯಾಂಕ್ ಪಡೆದಿರುವ ನವೀನ್ ಕುಂಬಾರ ಹಾಗೂ ಸುಶಾಂತ್ ಗುರ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಅಲ್ಲದೆ, 6ನೇ ರ್‍ಯಾಂಕ್ ಪಡೆದ ಇಬ್ಬರು, 7ನೇ ರ್‍ಯಾಂಕ್ ಪಡೆದ ಮೂವರು, 8ನೇ ರ್‍ಯಾಂಕ್ ಪಡೆದ ಇಬ್ಬರು, 9ನೇ ರ್‍ಯಾಂಕ್ ಪಡೆದ ಐವರು ಹಾಗೂ 10ನೇ ರ್‍ಯಾಂಕ್ ಪಡೆದ ನಾಲ್ವರು ವಿದ್ಯಾರ್ಥಿಗಳು ರಾಜ್ಯ ಮಟ್ಟದಲ್ಲಿ ಸಾಧನೆ ಮಾಡಿದ್ದಾರೆ ಎಂದು ಮಾಹಿತಿ ನೀಡಿದರು.

ತಾಲೂಕಿನ ಒಟ್ಟು 125 ಪ್ರೌಢಶಾಲೆಗಳ ಪೈಕಿ 52 ಶಾಲೆಗಳು ಶೇ.100 ಫಲಿತಾಂಶ ದಾಖಲಿಸಿದ್ದು, ಮತ್ತೊಂದು 27 ಶಾಲೆಗಳಲ್ಲಿ ಕೇವಲ ಒಬ್ಬೊಬ್ಬ ವಿದ್ಯಾರ್ಥಿಗಳು ಮಾತ್ರ ಅನುತ್ತೀರ್ಣರಾಗಿದ್ದಾರೆ. ಆ ವಿದ್ಯಾರ್ಥಿಗಳ ಮರುಮೌಲ್ಯಮಾಪನಕ್ಕಾಗಿ ಎಸ್‌ಎಸ್‌ಎಲ್‌ಸಿ ಮಂಡಳಿಗೆ ಮನವಿ ಸಲ್ಲಿಸಲಾಗಿದೆ. ಮರುಮೌಲ್ಯಮಾಪನದಲ್ಲಿಯೂ ವಿದ್ಯಾರ್ಥಿಗಳು ಉತ್ತೀರ್ಣರಾದರೆ, ತಾಲೂಕಿನ ಶೇ.70ಕ್ಕೂ ಹೆಚ್ಚು ಶಾಲೆಗಳು ಶೇ.100 ಫಲಿತಾಂಶ ಸಾಧಿಸಿದ ಐತಿಹಾಸಿಕ ದಾಖಲೆಯಾಗಲಿದೆ ಎಂದು ಹೇಳಿದರು.

ರಬಕವಿ–ಬನಹಟ್ಟಿ ಕ್ಷೇತ್ರವನ್ನು ಪ್ರತ್ಯೇಕವಾಗಿ ಪರಿಗಣಿಸಿದಾಗ ಶೇ.96.39 ಫಲಿತಾಂಶದೊಂದಿಗೆ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಜಮಖಂಡಿ ತಾಲೂಕು ಅಲ್ಪ ಅಂತರದಲ್ಲಿ ತೃತೀಯ ಸ್ಥಾನ ಪಡೆದಿದೆ. ಕೇವಲ ಶೇ.0.08 ಅಂತರದಿಂದ ಈ ಸ್ಥಾನ ಬದಲಾಗಿದ್ದು, ಕೆಲವು ದೊಡ್ಡ ಶಾಲೆಗಳ ಕಡಿಮೆ ಫಲಿತಾಂಶದಿಂದ ಈ ವ್ಯತ್ಯಾಸ ಉಂಟಾಗಿದೆ ಎಂದು ವಿವರಿಸಿದರು.

ಕೊನೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರಿಗೆ ಹೃದಯಪೂರ್ವಕ ಅಭಿನಂದನೆ ಹಾಗೂ ಕೃತಜ್ಞತೆಗಳನ್ನು ಸಲ್ಲಿಸಿದರು.

# ಜೆಜೆಎಂ ಯೋಜನೆ: ಹಣ ಬಿಡುಗಡೆಗೆ ಕೇಂದ್ರ ವಿಫಲ– ಟಿಬಿಜೆ ಆರೋಪ



**ಸಿರಾ, ಮೇ 12–** ಜಲ ಜೀವನ್ ಮಿಷನ್ ಯೋಜನೆಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ತಲಾ 50ರ ಅನುಪಾತದಲ್ಲಿ 13500 ಕೋಟಿ ಅನುದಾನ ಬಿಡುಗಡೆ ಮಾಡಬೇಕಾಗಿತ್ತು. ಆದರೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿಲ್ಲ ಎಂದು ಶಾಸಕ ಹಾಗೂ ದೆಹಲಿ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ ಆರೋಪಿಸಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಲ ಜೀವನ್ ಎಂಬ ಮಹತ್ತರವಾದ ಯೋಜನೆಯನ್ನು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ರೂಪಿಸಿದ್ದು, ಕೇಂದ್ರ ಸರ್ಕಾರ ಈ ಯೋಜನೆಗೆ ಹಣ ಬಿಡುಗಡೆ ಮಾಡಬೇಕಿತ್ತು. ಆದರೆ ಅನುದಾನ ನೀಡುವಲ್ಲಿ ವಿಫಲವಾಗಿದೆ. ಆದರೂ ಸಹ ಸಿರಾ ತಾಲ್ಲೂಕಿನಲ್ಲಿ 379 ಪ್ರಾಜೆಕ್ಟ್ ಗಳು ಈಗಾಗಲೇ ಪೂರ್ಣಗೊಂಡಿರುವುದು ಹೆಮ್ಮೆಯ ಸಂಗತಿ ಎಂದರು.

ತಾಲ್ಲೂಕಿನ 40 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿದೆ. ಬರ ಗ್ಯಾರಂಟಿ, ಅದು ಈಗಾಗಲೇ ಡಿಕ್ಲೇರ್ ಸಹ ಆಗಿದೆ. ಕೊಳವೆ ಬಾವಿ ಕೊರೆದರೆ ನೀರು ಸಿಗುತ್ತಿಲ್ಲ ಎಂದು ತಿಳಿಸಿದರು.ಇಂತಹ ಸಮಯದಲ್ಲಿ ನಗರದಲ್ಲಿ ಕೈಗೊಂಡಿರುವ ಜೆಜೆಎಂ ಕಾಮಗಾರಿ ಸಂಪೂರ್ಣವಾಗಿ ಕಳಪೆಯಿಂದ ಕೂಡಿದೆ. ಒಂದು ವಾರ್ಡಿನಲ್ಲಿಯೂ ರಸ್ತೆಗಳು ಸರಿಯಾಗಿಲ್ಲ. ಯಾವೊಂದು ವಾರ್ಡಿನಲ್ಲಿಯೂ ಕಾಮಗಾರಿ ಪೂರ್ಣಗೊಂಡಿಲ್ಲ. ಯಾವಾಗ ಕಾಮಗಾರಿ ಪೂರ್ಣಗೊಳ್ಳುತ್ತದೆ, ಇನ್ನೆಷ್ಟು ದಿನ ಜನ ಕಷ್ಟ ಅನುಭವಿಸಬೇಕು ಎಂದು ಸದಸ್ಯರು ಪ್ರಶ್ನಿಸಿದರು.ಇನ್ನು ರಸ್ತೆಯುದ್ದಕ್ಕೂ ಫ್ಲೆಕ್ಸ್‌ಗಳನ್ನ ಹಾಕಿ ನಗರದ ಸೌಂದರ್ಯ ಹಾಳಾಗಿದೆ. ಇದರಿಂದ ಸಾಕಷ್ಟು ಅವಘಡಗಳು ಸಂಭವಿಸುತ್ತವೆ. ಹಾಗಾಗಿ ಇದರ ವಿರುದ್ಧ ಕ್ರಮ ಕೈಗೊಳ್ಳಬೇಕು ಮತ್ತು ನಗರಸಭೆ ಅನುಮತಿಯನ್ನು ಪಡೆದು ಫ್ಲೆಕ್ಸ್‌ಗಳನ್ನು ಅಳವಡಿಸುವಂತಹ ವಾತಾವರಣ ನಿರ್ಮಾಣ ಮಾಡಬೇಕು ಎಂದು ಸದಸ್ಯರು ಒತ್ತಾಯಿಸಿದರು.

ಇನ್ನು ಐಡಿಎಸ್‌ಎಂಟಿ ಅಂಗಡಿ ಮಳಿಗೆಗಳ ಮಾಲೀಕರು ಲಕ್ಷಾಂತರ ರೂ. ಬಾಡಿಗೆ ಹಣವನ್ನು ಬಾಕಿ ಉಳಿಸಿಕೊಂಡಿದ್ದಾರೆ. ಇತ್ತ ಮಳಿಗೆ ಖಾಲಿ ಮಾಡಲು ಸಹಾ ಸಾಧ್ಯವಾಗುತ್ತಿಲ್ಲ. ಕೂಡಲೇ ಇದಕ್ಕೊಂದು ಅಂತಿಮ ನಿರ್ಣಯ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಹಂತದಲ್ಲಿ ಮಾತನಾಡಿದ ಪೌರಾಯುಕ್ತ ಕೆ. ರುದ್ರೇಶ್, ಈ ಸಂಬಂಧವಾಗಿ ಜಿಲ್ಲಾಧಿಕಾರಿಗಳ ಹತ್ತಿರ ಕೂಲಂಕುಶವಾಗಿ ಮಾತ ನಾಡಿದ್ದು, ಮುಂದಿನ 15 ದಿನದ ಒಳಗೆ ಎಲ್ಲಾ ಪ್ರಕ್ರಿಯೆಗಳು ಮುಗಿದು, ಮಳಿಗೆಗಳ ಹರಾಜು ಪ್ರಕ್ರಿಯೆ ಮಾಡಲಾಗುವುದು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾದ ಸ್ಥಾಯಿ ಸಮಿತಿ ಅಧ್ಯಕ್ಷ ಕೃಷ್ಣಪ್ಪ ರವರನ್ನ ಶಾಸಕರು ಸನ್ಮಾನಿಸಿದರು.

ಸಭೆಯಲ್ಲಿ ಅಧ್ಯಕ್ಷ ಜೀಶಾನ್ ಅಹಮ್ಮದ್, ಉಪಾಧ್ಯಕ್ಷ ಲಕ್ಷ್ಮೀಕಾಂತ್ ಸೇರಿದಂತೆ ನಗರಸಭೆ ಸದಸ್ಯರುಗಳು, ಅಧಿಕಾರಿಗಳು ಭಾಗವಹಿಸಿದ್ದರು.

# ಕಾರ್ಮಿಕ ಇಲಾಖೆಯಿಂದ ವಿವಿಧ ಸೌಲಭ್ಯಗಳ ಲಭ್ಯ: ಕಾರ್ಮಿಕ ಅಧಿಕಾರಿ ಆರತಿ

**ರಾಯಚೂರು ಮೇ.12 :** ಕಾರ್ಮಿಕ ಇಲಾಖೆಯು ಕಾರ್ಮಿಕರ ಕಲ್ಯಾಣ, ಸಾಮಾಜಿಕ ಭದ್ರತೆ ಮತ್ತು ಕೈಗಾರಿಕಾ ಶಾಂತಿಯನ್ನು ಕಾಪಾಡುವ ಪ್ರಮುಖ ಸರ್ಕಾರಿ ಸಂಸ್ಥೆಯಾಗಿದೆ. ಅಸಂಘಟಿತ ಮತ್ತು ಸಂಘಟಿತ ಕಾರ್ಮಿಕರ ಹಕ್ಕುಗಳ ರಕ್ಷಣೆ, ಕನಿಷ್ಠ ವೇತನ ಜಾರಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮತ್ತು ಕಾರ್ಮಿಕ ಕಾಯ್ದೆಗಳ ಅನುಷ್ಠಾನವನ್ನು ನಿರ್ವಹಿಸುತ್ತಿದ್ದು, ಕಾರ್ಮಿಕರು ಇಲಾಖೆಯ ಅಧಿಕೃತ ವೆಬ್‌ಸೈಟ್ ಮೂಲಕ ನೋಂದಣಿ ಮತ್ತು ವಿವಿಧ ಸೇವೆಗಳನ್ನು ಪಡೆಯಬಹುದಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಆರತಿ ಅವರು ತಿಳಿಸಿದ್ದಾರೆ.

ಯೋಜನೆಗಳು, ಸೌಲಭ್ಯಗಳು:

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 18 ರಿಂದ 60 ವರ್ಷದೊಳಗಿರುವ ಕಳೆದ 12 ತಿಂಗಳಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ 90 ದಿನಗಳ ಕೆಲಸ ನಿರ್ವಹಿಸಿರಬೇಕು. ನೋಂದಣಿ ಶುಲ್ಕ 100 ರೂಪಾಯಿ ಹಾಗೂ ನವೀಕರಣ ಶುಲ್ಕ 50ರೂ. ಶೈಕ್ಷಣಿಕ ಧನಸಹಾಯ, ಮದುವೆ ಧನಸಹಾಯ, ವೈದ್ಯಕೀಯ ಧನಸಹಾಯ, ಪ್ರಮುಖ ವೈದ್ಯಕೀಯ ಧನ ಸಹಾಯ, ಹೆರಿಗೆ ಸೌಲಭ್ಯ, ತಾಯಿ ಮಗು ಸಹಾಯ ಹಸ್ತ, ಅಂತ್ಯಕ್ರಿಯೆ ವೆಚ್ಚ ಮತ್ತು ಅನುಗ್ರಹರಾಶಿ ಪರಿಹಾರ, ಪಿಂಚಣಿ ಸೌಲಭ್ಯ, ಕುಟುಂಬ ಪಿಂಚಣಿ ಸೌಲಭ್ಯ, ದುರ್ಬಲತೆ ಪಿಂಚಣಿ ಸೌಲಭ್ಯ, ಅಪಘಾತ ಪರಿಹಾರ, ಟೂಲ್ ಕಿಟ್ ಸೌಲಭ್ಯ, ಶ್ರಮಿಕ ಸಂಜೀವಿನಿ ಸಂಚಾರಿ ಚಿಕಿತ್ಸಾಲಯ ಪಡೆಯಬಹುದಾಗಿದೆ. ವಿವಿಧ ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ: ಯೋಜನೆಗೆ ಅರ್ಹ ಅಭ್ಯರ್ಥಿಗಳು 18 ರಿಂದ 60 ವರ್ಷದೊಳಗಿರಬೇಕು. ಪ್ರಸ್ತುತ 101 ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಅನ್ವಯಿಸುತ್ತದೆ. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ,ಪಿ.ಎಫ್ ಸೌಲಭ್ಯ ಹೊಂದಿರಬಾರದು. ಇವರಿಗೆ ನೋಂದಣಿ ಹಾಗೂ ನವೀಕರಣ ಶುಲ್ಕ ಉಚಿತವಾಗಿದೆ.

ಕರ್ನಾಟಕ ರಾಜ್ಯ ಮೋಟರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ: ವಯೋಮಿತಿ 18 ರಿಂದ 60 ವರ್ಷದೊಳಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ.ಪಿ.ಎಫ್ ಫಲಾನುಭವಿಗಳಾಗಿರಬಾರದು. ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಹ ಲಭ್ಯವಾಗುತ್ತದೆ ನೋಂದಣಿ ಹಾಗೂ ನವೀಕರಣ ಶುಲ್ಕ 50ರೂ. ಆಗಿದೆ. ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ: ವಯೋಮಿತಿ 18 ರಿಂದ 60 ವರ್ಷದೊಳಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ.ಪಿ.ಎಫ್ ಫಲಾನುಭವಿಗಳಾಗಿರಬಾರದು. ಕರ್ನಾಟಕದಲ್ಲಿ ಗಿಗ್ ವೃತ್ತಿ(ಡೆಲಿವರಿ) ನಿರ್ವಹಿಸುತ್ತಿರುವವರಿಗೆ ಮಾತ್ರ ನೋಂದಣಿ ಹಾಗೂ ನವೀಕರಣ ಶುಲ್ಕ ಉಚಿತವಾಗಿದೆ. ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ: ವಯೋಮಿತಿ 18 ರಿಂದ 59 ವರ್ಷದೊಳಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ ಮತ್ತು ಇ.ಪಿ.ಎಫ್ ಫಲಾನುಭವಿಗಳಾಗಿರಬಾರದು ನೋಂದಣಿ ಹಾಗೂ ನವೀಕರಣ ಶುಲ್ಕ ಉಚಿತವಾಗಿದೆ. ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್ ಧನ್ ಯೋಜನೆ: ಯೋಜನೆಯಡಿ 18 ರಿಂದ 40 ವರ್ಷದೊಳಗಿರಬೇಕು. ಮಾಸಿಕ ಆದಾಯ 15,000 ರೂ. ಅಥವಾ ಅದಕ್ಕಿಂತ ಕಡಿಮೆ ಇರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ/ ಇ.ಪಿ.ಎಫ್/ಎನ್.ಪಿ.ಎಸ್ ಯೋಜನೆಯ ಫಲಾನುಭವಿಗಳಾಗಿರಬಾರದು ವಯಸ್ಸಿನ ಆಧಾರಿತ ಮಾಸಿಕ ವಂತಿಕೆಯನ್ನು ಪಾವತಿಸಿದ ಅಸಂಘಟಿತ ವಲಯದ ಕಾರ್ಮಿಕರಿಗೆ 60 ವರ್ಷ ಪೂರ್ಣಗೊಂಡ ನಂತರ ಮಾಸಿಕ ನಿಶ್ಚಿತ 3000 ರೂ.ಗಳ ಪಿಂಚಣಿ ಸೌಲಭ್ಯ ದೊರೆಯುತ್ತದೆ. (ವಯೋಮಿತಿ ಆದಾರದ 55 ರಿಂದ 200 ರೂಪಾಯಿ) ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳಿಗೆ ರಾಷ್ಟ್ರೀಯ ಪಿಂಚಣಿ ಯೋಜನೆ: 18 ರಿಂದ 40 ವರ್ಷದೊಳಗಿರಬೇಕು. ವಾರ್ಷಿಕ ವಹಿವಾಟು ಗರಿಷ್ಠ 1.50 ಕೋಟಿ ರೂ.ಗಳ ಒಳಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಇ.ಎಸ್.ಐ/ ಇ.ಪಿ.ಎಫ್/ ಎನ್.ಪಿ.ಎಸ್/ಪಿಎಂಎಸ್‌ವೈಎಂ/ ಪಿ.ಎಂ.ಕೆ.ಎಂ.ವೈ. ಯೋಜನೆಯ ಫಲಾನುಭವಿಗಳಾಗಿರಬಾರದು. (ವಯೋಮಿತಿ ಆದಾರದ 55 ರಿಂದ 200 ರೂಪಾಯಿ) ವಯಸ್ಸಿನ ಆಧಾರಿತ ಮಾಸಿಕ ವಂತಿಕೆಯನ್ನು ಪಾವತಿಸಿದ ಅಸಂಘಟಿತ ವಲಯದ ಕಾರ್ಮಿಕರಿಗೆ 60 ವರ್ಷ ಪೂರ್ಣಗೊಂಡ ನಂತರ ಮಾಸಿಕ ನಿಶ್ಚಿತ 3000ರೂ.ಗಳ ಪಿಂಚಣಿ ಸೌಲಭ್ಯ ದೊರೆಯುತ್ತದೆ.


ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ಡೇಟಾಬೇಸ್ ಇ–ಶ್ರಮ್ ಯೋಜನೆ: 16 ರಿಂದ 59 ವಯೋಮಾನದವರಾಗಿರಬೇಕು. ಆದಾಯ ತೆರಿಗೆ ಪಾವತಿದಾರರಾಗಿರಬಾರದು. ಭವಿಷ್ಯನಿಧಿ ಹಾಗೂ ಇ.ಎಸ್.ಐ ಫಲಾನುಭವಿಯಾಗಿರದವರು ಈ ಯೋಜನೆಗೆ ಒಳಪಡಬಹುದಾಗಿದೆ. ಪ್ರಸ್ತುತ ಒಂದು ವರ್ಷದ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ ಪ್ರಯೋಜನ ಪಡೆಯಬಹುದು (ಅಪಘಾತದಿಂದ ಮರಣ ಹೊಂದಿದಲ್ಲಿ ಅಥವಾ ಶಾಶ್ವತ ದುರ್ಬಲತೆ ಹೊಂದಿದಲ್ಲಿ 2 ಲಕ್ಷ ರೂ. ಹಾಗೂ ಭಾಗಶಃ ಅಂಗವೈಕಲ್ಯಕ್ಕೆ 1 ಲಕ್ಷ ರೂ. ಪರಿಹಾರವು ಯೋಜನೆಯಡಿ ಇರುತ್ತದೆ. ನೋಂದಣಿ ಹಾಗೂ ನವೀಕರಣ ಶುಲ್ಕ ಉಚಿತವಾಗಿದೆ. ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ (ಆಶಾದೀಪ) ಸೊಸೈಟಿ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳುವುದುನ್ನು ಉತ್ತೇಜಿಸಲು, ನೇಮಕಾತಿ ಮಾಡಿಕೊಂಡ ಸಂಸ್ಥೆಗೆ ಅಂತಹ ನೌಕರರ ಇ.ಎಸ್.ಐ ಹಾಗೂ ಇ.ಪಿ.ಎಫ್ ವಂತಿಕೆಯನ್ನು ಮರುಪಾವತಿಸುವ ಮೂಲಕ ಆರ್ಥಿಕ ಸಹಾಯ ನೀಡುವುದು ತರಬೇತಿ ಪಡೆಯುವ ಅಪ್ರೆಂಟಿಸ್‌ಗಳಿಗೆ ನೀಡಿದ ಶಿಷ್ಯ ವೇತನವನ್ನು ಮಾಲೀಕರಿಗೆ ಮರು ಪಾವತಿಸುವುದು ಮಾಲೀಕರು ಪಾವತಿಸುವ ಇ.ಎಸ್.ಐ ಮತ್ತು ಇ.ಪಿ.ಎಫ್ ವಂತಿಕೆ ಮರುಪಾವತಿ, ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳ ಶಿಷ್ಯವೇತನ ಮರುಪಾವತಿ, ಅಪ್ರೆಂಟಿಸ್ ತರಬೇತಿ ನಂತರ ಖಾಯಂ ಮಾಡಿಕೊಂಡಲ್ಲಿ ವೇತನ ಮರು ಪಾವತಿ, ಹೊಸದಾಗಿ ಖಾಯಂ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳ ವೇತನ ಮರು ಪಾವತಿ ಯೋಜನೆಗಳು ಇರುತ್ತದೆ. ನೋಂದಣಿ ಹಾಗೂ ನವೀಕರಣ ಶುಲ್ಕ ಉಚಿತವಾಗಿದೆ. ಸೌಲಭ್ಯಗಳ ಅರ್ಜಿ ಸಲ್ಲಿಸುವಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ ಎಂದು ರಾಯಚೂರು ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಸ್ಸಾಂ ಸಿಎಂ ಆಗಿ ಬಿಸ್ವಾ ಶರ್ಮ ಪ್ರಮಾಣ ವಚನ

**ಗುವಾಹಟಿ,ಮೇ.12–** ಈಶಾನ್ಯ ರಾಜ್ಯ ಅಸ್ಸಾಂನಲ್ಲಿ ಹಾಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಸತತ ಎರಡನೇ ಬಾರಿಗೆ ಇಂದು ಮುಖ್ಯಾಮಂತ್ರಿಯಾಗಿ ಪ್ರಮಾಣವಚನ ಸ್ವೀಕಾರಿಸಿದರು



ಉ ಪ ವ ು ು ಖ್ಯ ವ ು ಂ ತ್ರಿ ಗ ಳ ು ಭಾಗವಹಿಸಿದ್ದರುಹಿಮಂತ ಬಿಸ್ವಾ ಶರ್ಮಾ ಅವರ ತಾಯಿ, ಮೃಣಾಲಿನಿ ದೇವಿ, ಪತ್ನಿ ರಿನಿಕಿ ಭುಯಾನ್ ಶರ್ಮಾ, ಪುತ್ರ ನಂದಿಲ್ ಬಿಸ್ವಾ ಶರ್ಮಾ ಮತ್ತು ಪುತ್ರಿ ಸುಕನ್ಯಾ ಶರ್ಮಾ ಕೂಡ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಜೊತೆಗೆ ನಾಲ್ವರು ಶಾಸಕರಾದ ರಾಮೇಶ್ವರ್ ತೇಲಿ, ಅತುಲ್ ಬೋರಾ,ಚರಣ್ ಬೋರಾ,ಅಜಂತಾ ನಿಯೋಗ್ ಅವರು ಸಚಿವರಾಗಿ ಪ್ರತೀಜ್ಞಾವಿಧಿ ಸ್ವೀಕರಿಸಿದರು.ಬಿಜೆಪಿಯಿಂದ ಇಬ್ಬರು ಹಾಗು ಎಜಿಪಿ ಮತ್ತು ಬಿಪಿಎಫ್ ನಿಂದ ತಲಾ ಓರ್ವ ಶಾಸಕ ಪ್ರಮಾಣ ವಚನ ಸ್ವೀಕರಿಸಿದರು

ಗುವಾಹಟಿಯ ಖಾನಪಾರದಲ್ಲಿರುವ ಪಶುವೈದ್ಯಕೀಯ ಕಾಲೇಜು ಮೈದಾನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರು ನೂತನ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮತ್ತು ಸಂಪುಟದ ಸದಸ್ಯರಿಗೆ ಅಧಿಕಾರ ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು

ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ಮೂರನೇ ಸತತ ಅವಧಿಯ ಆರಂಭವಾಗಿದ್ದು ಬಿಜೆಪಿ ಮಿತ್ರಪಕ್ಷಗಳಾದ ಎಜಿಪಿ ಮತ್ತು ಬಿಪಿಎಫ್‌ನ ಇಬ್ಬರು ಸೇರಿದಂತೆ ನಾಲ್ವರು ಸಚಿವರು ಹೊಸ ಎನ್‌ಡಿಎ ಸರ್ಕಾರದಲ್ಲಿ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರುಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ಜೊತೆಗೆ 40 ಕ್ಕೂ ಹೆಚ್ಚು ಎನ್‌ಡಿಎ ಮುಖ್ಯಮಂತ್ರಿಗಳು ಮತ್ತು

57 ವರ್ಷದ ಹೇಮಂತ್ ಬಿಸ್ವಾ ಶರ್ಮಾ ಅವರು ಸತತ ಎರಡನೇ ಅವಧಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ರಾಜ್ಯದ ಮೊದಲ ಕಾಂಗ್ರೆಸ್ಸೇತರ ನಾಯಕರಾಗಿದ್ದಾರೆ.2021 ರಲ್ಲಿ ಮೊದಲ ಬಾರಿಗೆ ಮುಖ್ಯಮಂತ್ರಿಯಾದ ಹಿಮಂತ ಬಿಸ್ವಾ ಶರ್ಮಾ, ಅಸ್ಸಾಂನಲ್ಲಿ ಸತತ ಎರಡು ಬಾರಿ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಮೊದಲ ಕಾಂಗ್ರೆಸ್ಸೇತರ ನಾಯಕ ಎನ್ನುವ ಹಿರಿಮೆಗೆ ಪಾತ್ರವಾಗಿದ್ದಾರೆ2016 ರಲ್ಲಿ ಆಗಿನ ಮುಖ್ಯಮಂತ್ರಿ ಸರ್ಬಾನಂದ ಸೋನೋವಾಲ್ ನೇತೃತ್ವದಲ್ಲಿ ಬಿಜೆಪಿ ನೇತೃತ್ವದ ಮೈತ್ರಿಕೂಟ ಮೊದಲ ಬಾರಿಗೆ ಅಧಿಕಾರಕ್ಕೆ ಬಂದ ನಂತರ ಇದು ರಾಜ್ಯದಲ್ಲಿ ಎನ್‌ಡಿಎ ಸತತ ಮೂರನೇ ಬಾರಿ ಅಧಿಕಾರಕ್ಕೆ ಬಂದಿದೆ.

ಬಿಜೆಪಿ, ಅಸ್ಸೋಮ್ ಗಣ ಪರಿಷತ್ –ಎಜಿಪಿ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ –ಬಿಪಿಎಫ್ ಒಳಗೊಂಡ ಎನ್‌ಡಿಎ, ವಿಧಾನಸಭಾ ಚುನಾವಣೆಯಲ್ಲಿ 126 ಸದಸ್ಯ ಬಲದ ಸದನದಲ್ಲಿ ದಾಖಲೆಯ 102 ಸ್ಥಾನಗಳನ್ನು ಗೆದ್ದು ಭರ್ಜರಿ ಬಹುಮತ ಗಳಿಸಿದೆ.ಇದರಲ್ಲಿ ಬಿಜೆಪಿ ಏಕಾಂಗಿಯಾಗಿ 82 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ, ರಾಜ್ಯದಲ್ಲಿ ಮೊದಲ ಬಾರಿಗೆ ಒಂದೇ ಪಕ್ಷದ ಬಹುಮತ ಗಳಿಸಿದ ಹಿರಿಮೆಗೂ ಪಾತ್ರವಾಗಿದೆ. ಎಜಿಪಿ ಮತ್ತು ಬಿಪಿಎಫ್ ತಲಾ 10 ಸ್ಥಾನಗಳನ್ನು ಗೆದ್ದವಿದೆ.

# ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ–04 ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು ಮೇ.12:**ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಹಂತ 4ರಡಿ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕುಟುಂಬಗಳಿಗೆ ಉಚಿತ ಯುಜಿಡಿ ಮನೆ ಸಂಪರ್ಕ ಕಲ್ಪಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಆಸಕ್ತರು ಜಾತಿ ಪ್ರಮಾಣ ಪತ್ರ, ಆಸ್ತಿ ಮಾಲೀಕತ್ವ ದಾಖಲಾತಿ / ಖಾತೆ / ಪಹಣಿ / ನೋಂದಣಿ ದಾಖಲೆ, ಆಧಾರ್ ಕಾರ್ಡ್ ಪ್ರತಿ, ಸಲ್ಲಿಸಲಾದ ದಾಖಲೆಗಳು ನಿಜವಾಗಿದ್ದು, ತಪ್ಪು ಮಾಹಿತಿ ನೀಡಿಲ್ಲ ಎಂಬುದಾಗಿ ನೋಟರಿ ಅಫಿಡೆವಿಟ್‌ದೊಂದಿಗೆ ದಿನಾಂಕ: 15–06–2026ರೊಳಗಾಗಿ ಪಾಲಿಕೆಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಭೀಮಾಶಂಕರ ಮೊ.ಸಂ:8076165543 ಅಥವಾ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜೈಪಾಲರೆಡ್ಡಿ ಮೊ.ಸಂ: 7989813605ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ವಿವಿಧ ಕಡೆ ಮೇ.14ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಮೇ.12:** ಕೆಪಿಟಿಸಿಎಲ್‌ನ ಟಿಎಲ್‌ಎಮ್ ಉಪ ವಿಭಾಗದ ವ್ಯಾಪ್ತಿಯ 110/11ಕೆವಿ ಜವಾಹರ ನಗರ ಸಬ್ ಸ್ಟೇಷನ್‌ನಿಂದ ವಡವಟ್ಟಿ (ಜವಾಹರ ನಗರ ಲೈನ್) ಜಂಗಲ್ ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ಮೇ.14ರ ಬೆಳಿಗ್ಗೆ ಬೆಳಿಗ್ಗೆ 8 ಗಂಟೆಯಿಂದ 12ಗಂಟೆಯವರಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 8ರಿಂದ ರಾಯಚೂರು ನಗರದ ತಾಯಾಮ್ಮ ಕಾಲೋನಿ, ಎಮ್.ವಿ.ಜಿ ಕಾಲೋನಿ, ಇಂಡಸ್ಟ್ರೀಯಲ್ ಏರಿಯಾ, ಗದ್ವಾಲ್‌ರಸ್ತೆ, ಅಶ್ವಿನಿ ಕಾಲೋನಿ, ಪಂಚಮುಖಿ ಕಾಲೋನಿ, ವಾಸವಿ ನಗರ, ಎನ್.ಜಿ.ಓ ಕಾಲೋನಿ, ನೀಲಕಂಠೇಶ್ವರ ನಗರ, ಎಕ್ಬಾಲ್ ನಗರ, ಅಂಬೇಡ್ಕರ್ ನಗರ, ಫಾರೂಕ್‌ಅನ್ವರ್ ಕಂಪನಿ, ಅಯ್ಯ ಬೌಡಿ, ನವಾಬ ಗಡ್ಡಾ, ಗಾಜಗಾರಪೇಟೆ, ಹನುಮಾನ್‌ಟಾಕೀಸ್, ನಗರೇಶ್ವರಟೆಂಪಲ್, ಜವಾಹರ ನಗರ ಸ್ಕೂಲ್, ಬೋಲಮಾನದೊಡ್ಡಿರೋಡ್, ಹನುಮಾನ್ ಟಾಕೀಜ್, ವಿದ್ಯಾನಗರ, ವಾಸವಿ ನಗರ, ಎಲ್‌ವಿಡಿ ಕಾಲೇಜ್, ಜವಾಹರ ನಗರ, ಟೆಲೆಫೋನ್‌ಎಕ್ಸೇಚೆಂಜ್, ರಾಯಚೂರು ವಾಣಿ, ತಿಮ್ಮಾಪೂರು ಪೇಟೆ, ಪಟೇಲ್ ರೋಡ್, ಕೃಷ್ಣದೇವರಾಯನಗರ, ಶಂಕರಸಿಂಗ್ ಕಾಲೋನಿ, ಸೆಂಟ್ರಲ್ ಸ್ಕೂಲ್, ಮಾಣಿಕ ಪ್ರಭು ಲೇಔಟ್, ಡೆಂಟಲ್ ಕಾಲೇಜ್, ನವೋದಯ ಇಂಜನೀಯರಿಂಗ್ ಕಾಲೇಜ್, ವಿಜಯಲಕ್ಷ್ಮಿ ಲೇಔಟ್, ಲಕ್ಷ್ಮಣ ಲೇಔಟ್, ಅಮರಖೇಡ್ ಲೇಔಟ್, ಮಾಣಿಕ ನಗರ, ಗರ್ನಮೆಂಟ್ ಪಾಲಿಟೆಕ್ನಿಕ್, ಐಟಿಐ ಕಾಲೇಜ್, ಸಾವಿತ್ರಿ ಕಾಲೋನಿ, ನಿರ್ಮಿತಿ ಕೇಂದ್ರ ಮತ್ತು ನಿರ್ಮಿತಿ ಕೇಂದ್ರದ ಸುತ್ತಮುತ್ತಲಿನ ಪ್ರದೇಶ, ನಿಸರ್ಗ ಲೇಔಟ್ ಮತ್ತು ನಿಸರ್ಗ ಲೇಔಟ್‌ನ ಸುತ್ತಲಿನ ಎಲ್ಲಾ ಸರಕಾರಿ ಶಾಲಾ ವಸತಿ ನಿಲಯಗಳು, ಮೊರಾರ್ಜಿ ದೆಸಾಯಿ ವಸತಿ ನಿಲಯ, ಗದ್ವಾಲ್ ರೋಡ್, ಅಯ್ಯಾಳಪ್ಪ ಸರ್ಕಲ್, ಅಶ್ವಿನಿ ಕಾಲೋನಿ, ಜಲಾಲ್‌ನಗರ, ಮಡ್ಡಿಪೇಟೆ, ಬಸವನಭಾವಿ ಸರ್ಕಲ್, ಮಾರ್ಕೆಟ್ ಯಾರ್ಡ್, ಗಂಜ್ ಏರಿಯಾ, ಸಿಯಾತಾಲಾಬ್‌ನ ಕೆಲವು ಪ್ರದೇಶ, ಸುದ್ದಿಮೂಲ ದಿನಪತ್ರಿಕೆ, ಕ್ಲಾರಿಟಿ ಡಯಾಗ್ನಾಸ್ ಸೆಂಟರ್, ಪೂರ್ಣಿಮಾ ಟಾಕೀಸ್ ಹೊಸ ಶಿವಮ್ ಆಸ್ಪತ್ರೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಜಿ ಆಹ್ವಾನ

**ರಾಯಚೂರು ಮೇ.12 :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ 2026–27ನೇ ಸಾಲಿನಲ್ಲಿ ಮುಸ್ಲಿಂ, ಜೈನ್, ಸಿಖ್ಖ್, ಪಾರ್ಸಿ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಂದ ಅರಿವು ಸಿಇಟಿ/ ನೀಟ್ ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ.

ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾದಿಕಾರದಿಂದ ಸಿಇಟಿ/ ನೀಟ್ ಮುಂಖಾತರ ಎಂ.ಬಿ.ಬಿ.ಎಸ್/ ಬಿ.ಡಿ.ಎಸ್./ ಆಯುಷ್/ ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್/ ಬ್ಯಾಚುಲರ್ ಆಫ್ ಇಂಜಿನಿಯರಿಂಗ್/ ಬ್ಯಾಚುಲರ್ ಆಫ್ ಟೆಕ್ನಾಲಜಿ/ ಫಾರ್ಮಸಿ, ಕೃಷಿ ವಿಜ್ಞಾನ ಮತ್ತು ಪಶು ವೈದ್ಯಕೀಯ ಇಂತಹ ಕೋರ್ಸಗಳಿಗೆ ಅಯ್ಕೆಯಾದ ವಿದ್ಯಾರ್ಥಿಗಳಿಗೆ ಸಾಲವನ್ನು ನೀಡಲಾಗುವುದು, ಆಸಕ್ತ ವಿದ್ಯಾರ್ಥಿಗಳು ದಿನಾಂಕ: 30–05–2026ರೊಳಗಾಗಿ ಆನ್‌ಲೈನ್ ನಿಗಮದ ವೆಬ್‌ಸೈಟ್ ವಿಳಾಸ: http://kmdconline.karnataka.gov.in ಗೆ ಲಿಂಕ್‌ಗೆ ಕ್ಲಿಕ್ ಮಾಡಬೇಕು. ನಂತರ ಅರ್ಜಿಯನ್ನು ತುಂಬಿ ನೇರವಾಗಿ ನಿಗಮದ ಜಿಲ್ಲಾ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ನಂ.12–11–49,1 ನೇ ಮಹಡಿ ಅಮೀರ ಟ್ರೇಡಿಂಗ್ ಕಾಂಪ್ಲೆಕ್ಸ್, ಅರಬ್ ಮೋಹಲ್ಲಾ ರಾಯಚೂರು ದೂರವಾಣಿ ಸಂಖ್ಯೆ: 08532 250825ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಗಸ್ಟ್ 21ರಿಂದ ಆಗಸ್ಟ್ 23ರವರೆಗೆ ಸಮಾಧಾನ್ ಸಮರೋಹ್: ನ್ಯಾ. ಸಿದ್ಧರಾಮಪ್ಪ ಕಲ್ಯಾಣರಾವ್

**ರಾಯಚೂರು ಮೇ.12:** ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಸರ್ವೋಚ್ಚ ನ್ಯಾಯಾಲಯವು ಸಮಾಧಾನ್ ಸಮರೋಹ್ ಎನ್ನುವ ವಿಶೇಷ ಲೋಕಾ ಅದಾಲತ್ ಅನ್ನು 2026ರ ಆಗಸ್ಟ್ 21 ರಿಂದ 23ರವರೆಗೆ ಆಯೋಜಿಸಲಾಗಿದೆ ಎಂದು ಪ್ರಧಾನ ಹಿರಿಯ ವ್ಯವಹಾರ ನ್ಯಾಯಾಧೀಶರು ಮತ್ತು ಮು.ನ್ಯಾ.ದಂ.ಗಳು, ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರಿ ಸದಸ್ಯ ಕಾರ್ಯದರ್ಶಿಗಳಾದ ಸಿದ್ಧರಾಮಪ್ಪ ಕಲ್ಯಾಣರಾವ್ ಅವರು ತಿಳಿಸಿದ್ದಾರೆ.

ವಿಶೇಷ ಲೋಕ್ ಅದಾಲತ್ ಅನ್ನು ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ನಿವಾರಣೆ ಮಾಡುವ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳ ನ್ಯಾಯಾಧೀಶರೊಂದಿಗೆ ವಿಡಿಯೋ ಸಂವಾದ ಸಭೆ ನಡೆಸಲಾಯಿತು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ವಿಡಿಯೋ ಕಾನ್ಸರೆನ್ಸ್ ಮೂಲಕ ನಡೆದ ಈ ಮಹತ್ವದ ಸಭೆಯಲ್ಲಿ ಸುಪ್ರೀಂಕೋರ್ಟ್ ನ ಮಾರ್ಗದರ್ಶನದಂತೆ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿ ಕುರಿತು ಚರ್ಚೆ ನಡೆಸಲಾಯಿತು.

ಈ ವೇಳೆ ಕರ್ನಾಟಕದ ನಾನಾ ಜಿಲ್ಲೆಗಳ ನ್ಯಾಯಾಧೀಶರು ಭಾಗವಹಿಸಿ, ತಮ್ಮ ತಮ್ಮ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಸ್ಥಿತಿಗತಿ ಹಾಗೂ ಪರಿಹಾರ ಕ್ರಮಗಳ ಬಗ್ಗೆ ವಿವರಿಸಿದರು. ಅಧಿಕಾರಿಗಳು, ಪ್ರಕರಣಗಳನ್ನು ನ್ಯಾಯಾಲಯದ ಹೊರಗಡೆಯೇ ಪರಸ್ಪರ ಸಮಾಧಾನದಿಂದ (ರಾಜಿ) ಬಗೆಹರಿಸುವ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ.

ನ್ಯಾಯಾಲಯಗಳ ಮೇಲಿನ ಭಾರ ಕಡಿಮೆಯಾಗುವುದಲ್ಲದೆ, ಸಾರ್ವಜನಿಕರಿಗೆ ಕಡಿಮೆ ಅವಧಿಯಲ್ಲಿ ನ್ಯಾಯ ದೊರಕಲು ಸಹಕಾರಿ ಆಗಲಿದೆ. ಈ ಸಭೆಯು ನ್ಯಾಯಾಂಗ ವ್ಯವಸ್ಥೆಯನ್ನು ಹೆಚ್ಚು ಪರಿಣಾಮಕಾರಿ ಮತ್ತು ಜನಸ್ನೇಹಿಯಾಗಿಸಲು ಒಂದು ಪ್ರಮುಖ ಹೆಜ್ಜೆಯಾಗಿದ್ದು, ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ನಿವಾರಣೆಗೆ ಹೊಸ ದಿಕ್ಕು ತೋರಿಸಲಿದ್ದು, ಎಲ್ಲಾ ವಕೀಲರು, ಕಕ್ಷಿದಾರರು, ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಎಲ್ಲಾ ಬಗೆಯ ಕೇಸುಗಳನ್ನು ವಿಶೇಷ ಲೋಕ ಅದಾಲತ್ ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥಪಡಿಸಿಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರಿ ಸದಸ್ಯ ಕಾರ್ಯದರ್ಶಿಗಳಾದ ಸಿದ್ಧರಾಮಪ್ಪ ಕಲ್ಯಾಣರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸ್ಸು ಹತ್ತುವಾಗ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1.65 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

**ಕಲಬುರಗಿ,ಮೇ.12–**ಮಹಿಳೆಯೊಬ್ಬರು ಬಸ್ ಹತ್ತುವ ಸಂದರ್ಭದಲ್ಲಿ ಅವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 1.65 ಲಕ್ಷ ರೂ.ಮೌಲ್ಯದ 33 ಗ್ರಾಂ.ಬಂಗಾರದ ಆಭರಣಗಳು ಕಳವಾಗಿರುವ ಘಟನೆ ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರ ನಡೆದಿದೆ.

ಕೋಟನೂರ (ಡಿ) ಗ್ರಾಮದ ಕಾಸಿಂಬಿ ರುಕ್ಮುದ್ದಿನ್ ಅವರು ತಮ್ಮ ಅಣ್ಣನ ಮಗಳ ಮದುವೆ ಇದ್ದ ಪ್ರಯುಕ್ತ ಸಾವಳಗಿ (ಬಿ) ಗ್ರಾಮಕ್ಕೆ ಹೋಗಲೆಂದು ಆಳಂದ ಚೆಕ್‌ಪೋಸ್ಟ್ ಹತ್ತಿರ ಬಸ್ ಹತ್ತುವ ವೇಳೆ ಕಳ್ಳರು ಅವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 75 ಸಾವಿರ ರೂ.ಮೌಲ್ಯದ 15 ಗ್ರಾಂ.ಬಂಗಾರದ ನೆಕ್ಲೆಸ್, 50 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಮಂಗಳಸೂತ್ರ, 25 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಕಿವಿಯೋಲೆ, 15 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ 2 ಸಣ್ಣ ಉಂಗುರಗಳು ಸೇರಿ 1.65 ಲಕ್ಷ ರೂ.ಮೌಲ್ಯದ 33 ಗ್ರಾಂ.ಬಂಗಾರದ ಆಭರಣ ಕಳವು ಮಾಡಿದ್ದಾರೆ.

ಈ ಬಗ್ಗೆ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE